
ಬೆಂಗಳೂರು ಸಂಪುಟ: 16 ಸಂಚಿಕೆ: 31 ಪುಟ: 06 ಸೋಮವಾರ 23-12-2024

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ನನಗೆಹೆಣ್ಣು ಮಗು ಬೇಕು, ಆದರೆ ಪತಿ ಸಹಕರಿಸುತ್ತಿಲ್ಲ

ಬುಜ್ಜಿಗಾಡು.. ಪ್ರಭಾಸ್ ಅವರ ಫೇವರಿಟ್ ಫ್ಲಾಪ್ ಸಿನಿಮಾ

ಐಸಿಸಿ ಟ್ರೋಫಿಗೆ ಇಂಗ್ಲೆಂಡ್ ತಂಡ ಪ್ರಕಟ ಪುಟ 6

## ಬಿಜೆಪಿಯವರ ಪ್ರತಿಭಟನೆಗೆ ನಾನು ಹೆದರಲ್ಲ; ಬಗ್ಗಲ್ಲ

# ನಾನಿನ್ನು ಸತ್ತಿಲ್ಲ

**ಬೆಳಗಾವಿ:** "ನಾನಿನ್ನು ಸತ್ತಿಲ್ಲ, ಬದುಕಿದ್ದೇನೆ. ಈ ಡಿ.ಕೆ.ಶಿವಕುಮಾರ್ ಇನ್ನೂ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸ್ಥಾನದಲ್ಲಿದ್ದಾನೆ. ಬಿಜೆಪಿಯವರ ಪ್ರತಿಭಟನೆಗೆ ನಾನು ಹೆದರಲ್ಲ. ಯಾವ ಬೆದರಿಕೆಗಳಿಗೂ ಬಗ್ಗಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಸವಾಲೆಸೆದರು.ಬೆಳಗಾವಿಯಲ್ಲಿ ಮಾತನಾಡಿದ ಅವರು, ಸಿ.ಟಿ. ರವಿ ಅವರನ್ನು ಸುತ್ತಾಡಿಸಿದ್ದರ ಬಗ್ಗೆ ಮಾತನಾಡುವ ಬಿಜೆಪಿಯವರು ಸಿ.ಟಿ ರವಿ ಮಹಿಳೆಯರ ಬಗ್ಗೆ ಆಡಿರುವ ಮಾತಿನ ಬಗ್ಗೆ ಯಾರೂ ಕೇಳುತ್ತಿಲ್ಲ ಎಂದು ಕೇಳಿದಾಗ, "ಈ ವಿಚಾರವನ್ನು ಮಾಧ್ಯಮಗಳು ಪ್ರಶ್ನೆ ಮಾಡಬೇಕು. ಈ ವಿಚಾರವಾಗಿ ನಾವು ಈಗ ಮಾತನಾಡುವುದಿಲ್ಲ. 27ರಂದು ಕಾರ್ಯಕ್ರಮಗಳು ಮುಗಿಯಲಿ ನಂತರ ಮಾತನಾಡುತ್ತೇವೆ" ಎಂದರು. ಪುಟ 2




## ಕೈಗಾರಿಕಾ ಉದ್ಯಮ ಸ್ಥಾಪನೆಗೆ ಸರ್ಕಾರ ಒಪ್ಪಿಗೆ

**ಬೆಂಗಳೂರು:** ರಾಜ್ಯದ ವಿವಿಧೆಡೆ 9823 ಕೋಟಿ ರೂ. ಮೊತ್ತದಲ್ಲಿ ಕೈಗಾರಿಕೆ ಉದ್ಯಮಗಳನ್ನು ಸ್ಥಾಪಿಸುವ 10 ಪ್ರಸ್ತಾವಗಳಿಗೆ ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ಅವರ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ನಡೆದ ರಾಜ್ಯ ಉನ್ನತ ಮಟ್ಟದ 64ನೇ ಒಪ್ಪಿಗೆ ನೀಡಿಕೆ ಸಭೆಯಲ್ಲಿ ರಾಜ್ಯದ ವಿವಿಧ ಕೈಗಾರಿಕಾ ವಲಯಗಳಲ್ಲಿ ಒಟ್ಟು 9,823 ಕೋಟಿ ರೂ. ಮೊತ್ತದ 10 ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಯಿತು. ಮೈಸೂರು ಬಳಿಯ ಕೋಚನಹಳ್ಳಿಯ ಎಲೆಕ್ಟ್ರಾನಿಕ್ಸ್ ಮ್ಯಾನಿಫ್ಯಾಕ್ಚರಿಂಗ್ ಕ್ಲಸ್ಟರ್‌ನ ಸೆಮಿಕಂಡಕ್ಟರ್ ವಲಯದಲ್ಲಿ 3425 ಕೋಟಿ ರೂಪಾಯಿ ವೆಚ್ಚದ ಪ್ರಥಮ ಯೋಜನೆಗೂ ಸಭೆ ಒಪ್ಪಿಗೆ ನೀಡಿತು. ಪುಟ 2



ಗಾಂಧಿ ಭಾರತ ಕಾರ್ಯಕ್ರಮದ ಅಂಗವಾಗಿ ಇದೇ ತಿಂಗಳು 27 ರಂದು ಸಾರ್ವಜನಿಕ ಕಾರ್ಯಕ್ರಮ ನಡೆಯುವ ಬೆಳಗಾವಿ ಕ್ಲಬ್ ರಸ್ತೆಯ ಸಿಪಿಇಡಿ ಶಾಲಾ ಮೈದಾನಕ್ಕೆ ಡಿಸಿಎಂ ಡಿ ಕೆ ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಸೋಮವಾರ ಭೇಟಿ ನೀಡಿ ಪೂರ್ವಸಿದ್ಧತೆ ಪರಿಶೀಲನೆ ನಡೆಸಿದರು. ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಶಾಸಕರಾದ ಗಣೇಶ್ ಹುಕ್ಕೇರಿ, ಅಂಜಲಿ ನಿಂಬಾಳ್ಕರ್ ಮತ್ತಿತರರು ಜತೆಗಿದ್ದರು.

## ಉನ್ನತ ಮಟ್ಟದ ತನಿಖೆಗೆ ಆಗ್ರಹ



**ಬೆಂಗಳೂರು:** ರಾಜ್ಯದಲ್ಲಿ ಬಾಣಂತಿಯರ ಸಾವು ಮುಂದುವರೆದಿರುವುದರಿಂದ ರಾಜ್ಯ ಸರ್ಕಾರ ಈ ಕೂಡಲೇ ಪ್ರಕರಣದ ಗಂಭೀರತೆಯನ್ನು ಅರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಕ್ ಮಾಡಿರುವ ಅವರು ರಾಜ್ಯದೆಲ್ಲೆಡೆ ಬಾಣಂತಿಯರ ಸರಣಿ ಸಾವಿನ ಪ್ರಕರಣ ಗಂಭೀರ ಸ್ವರೂಪ ಪಡೆದಿದ್ದರೂ ಮೊನ್ನೆಯಷ್ಟೇ ನಡೆದ ಬೆಳಗಾವಿಯ ಚಳಿಗಾಲದ ಅಧಿವೇಶನದ ನಂತರವೂ ಸಾವುಗಳು ನಿಲ್ಲುತ್ತಿಲ್ಲ ಎಂದರೆ ಸರ್ಕಾರದ ಅಸಡ್ಡೆತನ ತೋರುತ್ತದೆ ಎಂದು ಟೀಕಿಸಿದ್ದಾರೆ. ಪುಟ 2

## ಸಿ.ಟಿ.ರವಿ ವಿರುದ್ಧ ಕಾನೂನು ಸಮರ



**ಬೆಳಗಾವಿ:** ಬಿಜೆಪಿ ಎಂಎಲ್ಸಿ ಸಿ.ಟಿ.ರವಿ ನಿಂದನೆ ಮಾತುಗಳಿಂದ ತುಂಬಾ ನೊಂದಿದ್ದೇನೆ. ಸಿ.ಟಿ.ರವಿ ವಿರುದ್ಧ ಕಾನೂನು ಸಮರ ಮುಂದುವರಿಸುತ್ತೇನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕಳೆದ ಎರಡು ದಿನ ಮೌನಕ್ಕೆ ಶರಣಾಗಿದ್ದೆ. ನನಗೆ ಬಹಳಷ್ಟು ನೋವಾಗಿತ್ತು. ಕಳೆದ 26 ವರ್ಷಗಳಿಂದ ಸಂಘರ್ಷದಿಂದ ಮೇಲೆ ಬಂದಿದ್ದೇನೆ. ನಾನೇನು ರೆಡ್ ಕಾರ್ಪೆಟ್ ಮೇಲೆ ಬಂದಿಲ್ಲ ಎಂದರು. ಸಿಟಿ ರವಿ ಪ್ರಕರಣದ ವಿರುದ್ಧ ಪ್ರಧಾನಿ ಮೋದಿಯವರಿಗೂ ನಾನು ದೂರು ಕೊಡುತ್ತೇನೆ ಎಂದು ಹೆಬ್ಬಾಳ್ಕರ್ ಹೇಳಿದರು. ಸಿಟಿ ರವಿಯನ್ನು ನಾನು ಯಾವತ್ತೂ ಕ್ಷಮಿಸಲ್ಲ, ಬಾಯಿ ಬಿಟ್ರೆ ರಾಮ ರಾಮ ಎನ್ನುವ ಬಿಜೆಪಿಯವರಿಗೆ ನಾಚಿಕೆ ಆಗಬೇಕು, ಇಂಥ ನೂರು ಸಿಟಿ ರವಿಯನ್ನು ಎದುರಿಸಲು ಸಿದ್ಧ ಎಂದು ಹೇಳಿದರು. ಅಂದಿದ್ದು ಅವರು, ಅನಿಸಿಕೊಂಡಿದ್ದು ನಾನು, ಇಂಥ ರವಿಯವರಿಗೆ ಹೂವು ಹಾರ ಹಾಕಿ ಜೈಕಾರ ಹಾಕುತ್ತಾರೆ ಎಂದು ಕಿಡಿಕಾರಿದರು.

ಯಾವುದೇ ಕಾರಣಕ್ಕೂ ಸಿಟಿ ರವಿ ಕ್ಷಮಿಸಲ್ಲ, ಅವರಿಗೆ ಶಿಕ್ಷೆ ಆಗುವವರೆಗೂ ಬಿಡುವುದಿಲ್ಲ. ಸಿಎಂ ಮತ್ತು ಸಭಾಪತಿ ಅವರು ತನಿಖೆ ಮಾಡಬೇಕು. ಬೇಗ ಎಫ್‌ಎಸ್‌ಎಲ್ ರಿಪೋರ್ಟ್ ತರಿಸಿಕೊಳ್ಳಬೇಕು. ಒಬ್ಬರು ಯಾರಾದ್ರೂ ಕ್ಷಮೆ ಕೇಳಿದ್ರಾ?, ಮೆರವಣಿಗೆ ಮಾಡುತ್ತಿದ್ದಾರೆ, ಏನಾಗಿದೆ ಅವರಿಗೆ ಎಷ್ಟು ಹೊಲಿಗೆ ಬಿದ್ದಿದೆ. ಸಿಟಿ ರವಿಯವರೇ ನನಗೆ ಆ ಪದ ಬಳಸಿದ್ದೀರಿ, ಇಂತಹ ನೂರು ಸಿಟಿ ರವಿ ಬಂದ್ರೂ ನಾನು ಎದುರಿಸುತ್ತೇನೆ. ನನ್ನ ಬಳಿ ದಾಖಲೆ ಇವೆ ನಾನು ಇಂದೇ ಬಿಡುಗಡೆ ಮಾಡ್ತೇನಿ ಎಂದು ಹೇಳಿದರು. ನಿಮಗೆ ನಾಚಿಗೆ ಆಗಬೇಕು ಎನ್ ಕೌಂಟರ್ ಮಾಡೋದು ಅಂತೀರಾ. ರಾಜಕಾರಣ ಮಾಡಲು ಹೊರಟ್ಟಿದೀರಿ. ಇಡೀ ಕರ್ನಾಟಕ ರಾಜ್ಯದ ಪುಟ 2

## ಹಲ್ಲೆಗೆ ಯತ್ನಿಸಿದವರ ಮೇಲೆ ಪ್ರಕರಣ ದಾಖಲು

**ಬೆಳಗಾವಿ:** ಡಿ.19 ರಂದು ಬೆಳಗಾವಿ ಸುವರ್ಣ ಸೌಧದಲ್ಲಿ ಬಿಜೆಪಿ ಎಂಎಲ್ಸಿ ಸಿ.ಟಿ.ರವಿ ಅವರ ಮೇಲೆ ಹಲ್ಲೆಗೆ ಯತ್ನಿಸಿದ ವ್ಯಕ್ತಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಸಿ.ಟಿ.ರವಿ ಅವರಿಗೆ ಜೀವ ಬೆದರಿಕೆ ಹಾಕಲಾಗಿದ್ದು, ಹಲ್ಲೆಕೋರರು ಅವರನ್ನು ಹತ್ಯೆ ಮಾಡುವ ಉದ್ದೇಶ ಹೊಂದಿದ್ದರು ಎಂದು ಆರೋಪಿಸಿ ಬೆಳಗಾವಿಯ ಹಿರೇಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಆರೋಪಿಗಳ ವಿರುದ್ಧ ಬಿಎನ್‌ಎಸ್ 189(2), 191(2), 190, 126(2), 352, ಮತ್ತು 351(2) ಸೇರಿದಂತೆ ಕಾನೂನಿನ ವಿವಿಧ ವಿಭಾಗಗಳ ಪುಟ 2

## ಡಿಕ್ಕಿ; 3 ಸಾವು, ಮೂವರಿಗೆ ಗಾಯ

**ಧಾರವಾಡ:** ಕ್ಯಾಂಟರ್ ಪಲ್ಟಿಯಾಗಿ ಟಿಟಿ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮವಾಗಿ ಮೂವರು ಮೃತಪಟ್ಟ ಘಟನೆ ಧಾರವಾಡ ಜಿಲ್ಲೆಯ ಅಳ್ನಾವರ ತಾಲೂಕಿನ ಕಡಬಗಟ್ಟಿ ಗ್ರಾಮದ ಹೊರವಲಯದ ಬಳಿ ನಡೆದಿದೆ.

ಕ್ಯಾಂಟರ್ ವಾಹನದಲ್ಲಿದ್ದ ಹನುಮಂತಪ್ಪ ಮಲ್ಲದ, ಮಹಾಂತೇಶ ಚವ್ಹಾಣ, ಮಹದೇವ ಹುಳೊಳ್ಳಿ ಮೃತರು. ಸಾವನ್ನಪ್ಪಿದವರು ಬೆಳಗಾವಿ ಜಿಲ್ಲೆಯ ಶಿರಸಂಗಿ ಗ್ರಾಮದ ನಿವಾಸಿಗಳು ಎಂದು ಹೇಳಲಾಗುತ್ತಿದೆ. ಶಿರಸಂಗಿಯಿಂದ ಗೋವಾಗೆ ತೆರಳುವ ವೇಳೆ ಅಪಘಾತ ಸಂಭವಿಸಿದೆ. ಕ್ಯಾಂಟರ್ ವಾಹನ ಶಿರಸಂಗಿಯಿಂದ ಗೋವಾಗೆ ಪುಟ 2

## ಪದ ಬಳಸಿದ್ದು ಸತ್ಯ: ಅದಕ್ಕೆ ನಾನೇ ಸಾಕ್ಷಿ

ಮೈಸೂರು: ಸಿ.ಟಿ ರವಿ ವಿಧಾನ ಪರಿಷತ್ ನಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಪ್ರಾಸ್ಟಿಟ್ಯೂಟ್ ಎಂದಿದ್ದು ಸತ್ಯ. ನಾನೇ ಆ ಪದವನ್ನ ಕೇಳಿಸಿಕೊಂಡು ಒಂದು ಕ್ಷಣ ಗಾಬರಿಯಾಗಿ ಬಿಟ್ಟೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಮೈಸೂರಿನಲ್ಲಿ ಇಂದು ಮಾತನಾಡಿದ ಯತೀಂದ್ರ ಸಿದ್ದರಾಮಯ್ಯ, ಏನು ಇಂತಹ ಪದಗಳನ್ನ ಬಳಸುತ್ತಿದ್ದಾರಲ್ಲ ಅಂದು ಕೊಂಡೆ. ತಕ್ಷಣ ನಾನು ಲಕ್ಷ್ಮೀ ಹೆಬ್ಬಾಳ್ಕರ್ ಬಳಿಗೂ ಹೋದೆ. ಆಗ ಅವರು ಕೂಡ ನನಗೆ ಸಿ.ಟಿ ರವಿ ಬಳಸಿದ ಪದವನ್ನ ಹೇಳಿದರು. ಈಗ ಸಿ.ಟಿ ರವಿ ನಾನು ಆ ಪದವನ್ನ ಬಳಸಿಲ್ಲ ಎಂದು ಹೇಳುತ್ತಿದ್ದಾರೆ ಸಿ.ಟಿ ರವಿ ಬಳಸಿದ್ದು ಫ್ರಸ್ಟೇರೇಟ್ ಎಂಬ ಪದ ಅಲ್ಲ ಅವರು ಬಳಸಿದ್ದು ಪ್ರಾಸ್ಟಿಟೂಟ್ ಅದಕ್ಕೆ ನಾನೇ ಸಾಕ್ಷಿ. ಈಗ ಸಿಂಪಥಿ ಗಿಟ್ಟಿಸಿಕೊಳ್ಳಲು ಸಿ.ಟಿ ರವಿ ಡ್ರಾಮಾ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಪುಟ 2

## ರಾಜ್ಯದಲ್ಲಿ ಗೃಹ ಸಚಿವರು ಎನ್ನುವವರು ಇದ್ದಾರಾ?



ಹಾಸನ: ಸಿ.ಟಿ.ರವಿ ಪ್ರಕರಣದಲ್ಲಿ ಬಿಜೆಪಿಯುವರು ಸರಿಯಾದ ರೀತಿಯಲ್ಲಿ ಕಾನೂನು ಹೋರಾಟ ಮಾಡಿದರೆ ಪ್ರಕರಣಕ್ಕೆ ಸಂಬಂಧಪಟ್ಟ ಎಲ್ಲಾ ಪೊಲೀಸ್ ಅಧಿಕಾರಿಗಳೆಲ್ಲಾ ಸಸ್ಪೆಂಡ್ ಆಗುತ್ತಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರುಹೇಳಿದ್ದಾರೆ.

ಹೊಳೆನರಸೀಪುರ ತಾಲೂಕಿನ ಹರದನಹಳ್ಳಿಯಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಕೇಂದ್ರ ಸಚಿವರು; ರಾಜ್ಯಸಭೆಯಲ್ಲಿನ ಅಮಿತ್ ಶಾ ಅವರ ಹೇಳಿಕೆ ಬಗ್ಗೆ ಇವರು ವಿಧಾನಸಭೆಯಲ್ಲಿ ಚರ್ಚೆ ಮಾಡಿದ್ದಾರೆ. ಇದು ರಾಜ್ಯಸಭೆಯಲ್ಲಿ ಪ್ರಾರಂಭವಾದದ್ದು. ಈ ವಿಷಯ ಆ ಸದನಕ್ಕೆ ಸಂಬಂಧಪಟ್ಟ ವಿಷಯ. ಅಮಿತ್ ಶಾ ಅವರು ವಿಧಾನ ಪರಿಷತ್ ಸದಸ್ಯರಾ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಉತ್ತರ ಕರ್ನಾಟಕದ ಸಮಸ್ಯೆ ಬಗ್ಗೆ ಚರ್ಚೆಗೆ ವಿಶೇಷವಾದ ಅವಕಾಶ ಕೊಡುತ್ತೇವೆ ಎಂದು ಡಂಗೂರ ಹೊಡೆದರು. ನಿನ್ನೆಯೂ ಒಬ್ಬ ಹೆಣ್ಣುಮಗಳು ಬಳ್ಳಾರಿಯಲ್ಲಿ ಮಗುವಿಗೆ ಜನ್ಮ ಕೊಡುವಾಗ ತೀರಿಕೊಂಡಿದ್ದಾಳೆ. ಪ್ರತಿನಿತ್ಯ ಈ ಸಾವುಗಳು ಸಂಭವಿಸುತ್ತಿವೆ. ಇದ್ಯಾವುದರ ಬಗ್ಗೆ ರಾಜ್ಯ ಸರಕಾರಕ್ಕೆ ಕಿಂಚಿತ್ತೂ ಚಿಂತೆ ಇಲ್ಲ ಎಂದು ಕೇಂದ್ರ ಸಚಿವರು ಕಟುವಾಗಿ ಟೀಕಿಸಿದರು.

ಈ ಸರಕಾರಕ್ಕೆ ನಾಡಿನ ಭವಿಷ್ಯದ ಬಗ್ಗೆ ಚಿಂತೆ ಇಲ್ಲ. ಕೆಲವು ಪೊಲೀಸ್ ಅಧಿಕಾರಿಗಳನ್ನು ಇಟ್ಟುಕೊಂಡು ರಾಜಕೀಯ ವಿರೋಧಿಗಳನ್ನು ದಮನ ಪುಟ 2

## ರವಿ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯ

ಬೆಂಗಳೂರು: ಬೆಳಗಾವಿ ಚಳಿಗಾಲ ಅಧಿವೇಶನದ ವಿಧಾನಪರಿಷತ್ ಕಲಾಪದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ವಿರುದ್ಧ ಅವಾಚ್ಯ ಪದ ಬಳಕೆ ಮಾಡಿರುವ ಆರೋಪ ಸಂಬಂಧ ಪರಿಷತ್ ಸದಸ್ಯ ಸಿ.ಟಿ.ರವಿ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಅಖಿಲ ಭಾರತ ವೀರಶೈವ ಮಹಾಸಭಾ ಸರ್ಕಾರವನ್ನು ಒತ್ತಾಯಿಸಿದೆ. ಘಟನೆಯ ಕುರಿತು ವಿಷಾದ ವ್ಯಕ್ತಪಡಿಸಿರುವ ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ಡಾ.ಶಾಮನೂರು ಶಿವಶಂಕರಪ್ಪ, "ಭಾರತದಲ್ಲಿ ಮಟ 2 ಹೆಣ್ಣುಮಕ್ಕಳಿಗೆ ವಿಶೇಷ ಸ್ಥಾನಮಾನ ಮತ್ತು ಗೌರವ ನೀಡಲಾಗಿದೆ. ನಾಲಿಗೆಯು ನಾಗರಿಕತೆಯನ್ನ ಹೇಳುತ್ತದೆ. ಜನಪ್ರತಿನಿಧಿಗಳಾದವರು ಸದನದ ಗೌರವ, ಘನತೆ ಕಾಪಾಡಬೇಕು" ಎಂದಿದ್ದಾರೆ."ಸದನದ ಒಳಗೆ ಹಾಗೂ ಹೊರಗೆ ಜನಪ್ರತಿನಿಧಿಗಳ ನಡವಳಿಕೆಗಳು ಇತರರಿಗೆ ಮಾದರಿಯಾಗಿರಬೇಕು. ಪುಟ 2

## ವೇತನ ಪ್ರಮಾಣಪತ್ರ ಕಡ್ಡಾಯವಲ್ಲ



**ಕೋಲಾರ:** ಪಡಿತರ ಪಡೆಯಲು ಎಲ್ಲರ ವೇತನ ಪ್ರಮಾಣಪತ್ರ ಅಗತ್ಯವಿಲ್ಲ, ಬಿಪಿಎಲ್ ಕಾರ್ಡ್ ದಾರರು ಪಡಿತರ ಪಡೆಯೋದಕ್ಕೆ ಕುಟುಂಬದ ಎಲ್ಲರ ವೇತನ ಪ್ರಮಾಣ ಪತ್ರ ನೀಡುವುದು ಕಡ್ಡಾಯವಲ್ಲ ಎಂಬುದಾಗಿ ಆಹಾರ ಇಲಾಖೆ ಸಚಿವ ಕೆ.ಎಚ್ ಮುನಿಯಪ್ಪ ಸ್ಪಷ್ಟ ಪಡಿಸಿದ್ದಾರೆ.

ಕೋಲಾರದಲ್ಲಿ ಮಾತನಾಡಿದ ಅವರು, ಅರ್ಹರಲ್ಲದವರು ಬಿಪಿಎಲ್ ಕಾರ್ಡ್ ಪಡೆದಿರುವ ಬಗ್ಗೆ ಇಲಾಖೆಯಿಂದ ಪರಿಶೀಲನೆ ನಡೆಸಲಾಗುತ್ತಿದೆ, ಸರ್ಕಾರಿ ನೌಕರರು ಕಾರ್ಡ್ ಪಡೆದಿದ್ದರೇ ಅಂತವರ ರೇಷನ್ ಕಾರ್ಡ್ ರದ್ದುಗೊಳಿಸಲಾಗುವುದು, ಅಕ್ರಮ ಪಡಿತರ ಚೀಟಿ ಪರಿಶೀಲನೆಯಿಂದಾಗಿ ರೇಷನ್ ವಿತರಣೆ ಸೇರಿದಂತೆ ವಿವಿಧ ಕೆಲಸಗಳಲ್ಲಿ ಸ್ವಲ್ಪ ಏರುಪೇರಾಗಿತ್ತು, ಈಗ ಒಂದು ಹಂತಕ್ಕೆ ಬಂದಿದೆ. ಇನ್ಮುಂದೆ ಯಾವುದೇ ಸಮಸ್ಯೆ ಆಗುವುದಿಲ್ಲ, ಬಿಪಿಎಲ್ ಕಾರ್ಡ್ ಹೊಂದಿರೋರು ಸರ್ಕಾರಿ ನೌಕರರು ಆಗಿರಬಾರದು, ವಾರ್ಷಿಕ ಆದಾಯ ಮಿತಿ 1.20 ಲಕ್ಷ ಮೀರಬಾರದು, ಇಂತವರ ಯಾವುದೇ ರೇಷನ್ ಕಾರ್ಡ್ ರದ್ದುಗೊಳಿಸುವುದಿಲ್ಲ ಎಂದು ಹೇಳಿದರು.

ಕೇಂದ್ರ ಸಚಿವ ಅಮಿತ್ ಶಾ ಹೇಳಿಕೆ ದುರದೃಷ್ಟಕರ, ಅಂಬೇಡ್ಕರ್ ಅವರ ಕುರಿತು ಅಮಿತ್ ಶಾ ಹೇಳಿಕೆಗೆ ಸಚಿವ ಕೆಎಚ್ ಮುನಿಯಪ್ಪ ಖಂಡಿಸಿದ್ದಾರೆ. ಅಮಿತ್ ಶಾ ಹೇಳಿಕೆಯಿಂದ ದೇಶಕ್ಕೆ ಅಪಮಾನ ಮಾಡಿದಂತಾಗಿದೆ, ದೇಶಕ್ಕೆ ಅಂಬೇಡ್ಕರ್ ಹಾಗೂ ಗಾಂಧೀಜಿ ಎರಡು ಕಣ್ಣು ಪುಟ 2

## ರವಿ ಪ್ರಕರಣ: ಸಭಾಪತಿ ತೀರ್ಮಾನ



ತುಮಕೂರು: ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಬುದ್ಧಿವಂತ ರಾಜಕಾರಣಿ. ಅವರು ಆ ರೀತಿ ಮಾತನಾಡಿದ್ದಾರೆ ಎನ್ನುವುದು ನನಗೆ ಗೊತ್ತಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಭಾಪತಿಗಳು ತೀರ್ಮಾನ ಕೈಗೊಳ್ಳುತ್ತಾರೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಇಂದಿಲ್ಲಿ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿ.ಟಿ. ರವಿ ಏನು ಮಾತನಾಡಿದ್ದಾರೆ, ಏನು ಮಾತನಾಡಿಲ್ಲ ಎನ್ನುವುದರ ಬಗ್ಗೆ ತೀರ್ಮಾನ ಮಾಡೋರು ಪರಿಷತ್ ಸಭಾಪತಿಗಳು. ವಿಧಾನ ಪರಿಷತ್‌ನಲ್ಲಿ ಸಭಾಪತಿಗಳು ಎಷ್ಟು ಕಸ್ಟಡಿಯನ್ನೋ ಅದೇ ರೀತಿ ಲೋಕಸಭೆಯಲ್ಲಿ ನಮ್ಮ ಸ್ಪೀಕರ್ ಸಹ ಅಷ್ಟೇ ಕಸ್ಟೋಡಿಯನ್. ಹಾಗಾಗಿ ಸಭಾಪತಿಗಳೇ ತೀರ್ಮಾನ ಮಾಡುತ್ತಾರೆ ಎಂದರು.

ಸಿ.ಟಿ. ರವಿ ಅವರು ಏನು ಮಾತನಾಡಿದ್ದಾರೆ ಎಂಬುದು ನನಗೆ ಸರಿಯಾಗಿ ಗೊತ್ತಿಲ್ಲ. ಪತ್ರಿಕೆಗಳಲ್ಲಿ ಅವಾಚ್ಯ ಪದ ಬಳಕೆ ಮಾಡಿದ್ದಾರೆ ಎಂಬುದನ್ನು ಓದಿದ್ದೇನೆ. ಆದರೆ ರವಿ ಅವರನ್ನು ಇಡೀ ರಾತ್ರಿ ಪೊಲೀಸರು ಜೀಪಿನಲ್ಲಿ ಕೂರಿಸಿಕೊಂಡು ಸುತ್ತಾಡಿಸಿ ಮಾನಸಿಕ ಪುಟ 2

# ಬೆಳಗಾವಿ ಅಧಿವೇಶನ ಶತಮಾನೋತ್ಸವ; ದೇಶದ ಇತಿಹಾಸ ಸಂಭ್ರಮಿಸುವ ಕಾರ್ಯಕ್ರಮ

**ಬೆಳಗಾವಿ:** ಬೆಳಗಾವಿ ಅಧಿವೇಶನ ಶತಮಾನೋತ್ಸವ ಆಚರಣೆ ಐತಿಹಾಸಿಕ ಕಾರ್ಯಕ್ರಮ. ದೇಶದ ಇತಿಹಾಸವನ್ನು ಸಂಭ್ರಮಿಸುವ ಕಾರ್ಯಕ್ರಮ. ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದ ಅವರು, "ಅಂದು 1924ರಲ್ಲಿ ಮಹಾತ್ಮಾ ಗಾಂಧೀಜಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದಾಗ ಜವಹಾರ್ ಲಾಲ್ ನೆಹರು ಹಾಗೂ ಕರ್ನಾಟಕದವರಾದ ಗಂಗಾಧರ ದೇಶಪಾಂಡೆ ಅವರು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾಗಿದ್ದರು. ಅವರಿಬ್ಬರು ಸೇರಿ ಬೆಳಗಾವಿಯಲ್ಲಿ ಕಾಂಗ್ರೆಸ್ ಅಧಿವೇಶನ ನಡೆಸಿ ಕಾಂಗ್ರೆಸ್ ಅಧ್ಯಕ್ಷರಾಗುವಂತೆ ಮಾಡಿದರು" ಎಂದು ತಿಳಿಸಿದರು.

"ಇಲ್ಲಿಂದ ಗಾಂಧಿ ಅವರು ದೇಶದ ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದರು. 2023ರ ಚುನಾವಣೆ ಸಮಯದಲ್ಲಿ ಇದೇ ಜಾಗದಿಂದ ಪ್ರಜಾಧ್ವನಿ ಯಾತ್ರೆ ಆರಂಭಿಸಿ ನಮ್ಮ ಹೋರಾಟ ಮಾಡಿದೆವು. ನಂತರ ರಾಜ್ಯದಲ್ಲಿ 136 ಕ್ಷೇತ್ರಗಳನ್ನು ಗೆದ್ದು ಸುಭದ್ರ ಸರ್ಕಾರ ಸ್ಥಾಪಿಸಿದೆವು" ಎಂದು ಹೇಳಿದರು."ಮತ್ತೆ ಇದೇ ಭೂಮಿಯಿಂದ ದೇಶ ಹಾಗೂ ರಾಜ್ಯವನ್ನು ಯಾವ ದಿಕ್ಕಿನಲ್ಲಿ ಕೊಂಡೊಯ್ಯಬೇಕು ಎಂದು ತೀರ್ಮಾನ ಮಾಡಲು ಈ ಕಾರ್ಯಕ್ರಮ



ಮಾಡಲಾಗುತ್ತಿದೆ. ಈಗಿನ ಕಾಲಘಟ್ಟದಲ್ಲಿ ದೇಶ ಹಾಗೂ ರಾಜ್ಯ ಎದುರಿಸುತ್ತಿರುವ ಸವಾಲುಗಳನ್ನು ಚರ್ಚಿಸಿ ಯಾವ ರೀತಿ ಹೋರಾಟ ಮಾಡಬೇಕು ಎಂಬುದನ್ನು ದೇಶದ ಎಲ್ಲಾ ಪ್ರಮುಖ ನಾಯಕರು ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಲಿದ್ದಾರೆ" ಎಂದರು. ಸುವರ್ಣ ಸೌಧದ ಗಾಂಧಿ ಪ್ರತಿಮೆ ಅನಾವರಣ ಕಾರ್ಯಕ್ರಮಕ್ಕೆ ಎಲ್ಲಾ ಪಕ್ಷಕ್ಕೂ ಆಹ್ವಾನ ಇದೆಯೇ ಎಂದು ಕೇಳಿದಾಗ, "ವಿರೋಧ ಪಕ್ಷಗಳ ನಾಯಕರು, ಸಂಸದರು, ಉಭಯ ಸದನಗಳ ಸಭಾಧ್ಯಕ್ಷರು ಹಾಗೂ ಸಭಾಪತಿಗಳು, ಎಲ್ಲಾ ಪಕ್ಷಗಳ ಶಾಸಕರು ಹಾಗೂ ಪರಿಷತ್ ಸದಸ್ಯರು ಸೇರಿ ಎಲ್ಲಾ ಪಕ್ಷಗಳಿಗೂ ಆಹ್ವಾನ ನೀಡಲಾಗುವುದು. ಇದು ಸಂಪೂರ್ಣ ಸರ್ಕಾರಿ ಕಾರ್ಯಕ್ರಮ. ಭದ್ರತಾ ದೃಷ್ಟಿಯಿಂದ ಈ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಆಹ್ವಾನ ಇರುವುದಿಲ್ಲ. ಬೆಳಗಾವಿಯಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಇತರೆ ವಿಶೇಷ ಅತಿಥಿಗಳಿಗೆ ಆಹ್ವಾನ ನೀಡಲಾಗುವುದು" ಎಂದು ತಿಳಿಸಿದರು.

ದೇಶದಾದ್ಯಂತ ಎಷ್ಟು ಜನ ಕಾಂಗ್ರೆಸ್ ನಾಯಕರು ಆಗಮಿಸುತ್ತಿದ್ದಾರೆ ಎಂದು ಕೇಳಿದಾಗ, "ದೇಶಾದ್ಯಂತ ಕಾಂಗ್ರೆಸ್ ಪಕ್ಷದ ಪ್ರಮುಖ 500ರಿಂದ 600 ಜನ ಕಾಂಗ್ರೆಸ್ ನಾಯಕರು ಮಾತ್ರ ಆಗಮಿಸುತ್ತಿದ್ದಾರೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು, ಕಾರ್ಯಕಾರಿ ಸಮಿತಿ ಸದಸ್ಯರು, ಎಲ್ಲಾ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಎಲ್ಲಾ ರಾಜ್ಯಗಳ ಶಾಸಕಾಂಗ ಪಕ್ಷದ ನಾಯಕರು, ಸಂಸದರು ಆಗಮಿಸಲಿದ್ದಾರೆ.

ಇವರೆಲ್ಲರೂ ಸಾರ್ವಜನಿಕ ಸಮಾವೇಶದಲ್ಲಿ ಭಾಗವಹಿಸಲಿದ್ದು, ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸಮಿತಿಯ ಸದಸ್ಯರು ಮಾತ್ರ ಭಾಗವಹಿಸಲಿದ್ದಾರೆ" ಎಂದು ತಿಳಿಸಿದರು.


# ಎಥಿಕ್ಸ್ ಕಮಿಟಿಗೆ ಕೊಡುವ ಅವಶ್ಯಕತೆ ಇಲ್ಲ: ಹೊರಟ್ಟಿ

ಬೆಂಗಳೂರು: "ಎಂಎಲ್‌ಸಿ ಸಿ.ಟಿ.ರವಿ ಪದ ಬಳಕೆ ಪ್ರಕರಣ ಮುಗಿದ ಅಧ್ಯಾಯ. ಎಥಿಕ್ಸ್ ಕಮಿಟಿಗೆ ಕೊಡುವ ಅವಶ್ಯಕತೆ ಬರುವುದಿಲ್ಲ" ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನ ತಮ್ಮ ನಿವಾಸದಲ್ಲಿ ಮಾಧ್ಯಮಗೋಷ್ಠಿ ನಡೆಸಿದ ಅವರು, ಎಥಿಕ್ಸ್ ಕಮಿಟಿ ರಚನೆ ಬಗ್ಗೆ ಚರ್ಚೆಯಾಗುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿ, "ಎಥಿಕ್ಸ್ ಕಮಿಟಿಗೆ ಕೊಡುವ ಅವಶ್ಯಕತೆ ಬರುವುದಿಲ್ಲ. ನಾನು ಸದನದಲ್ಲಿ ರೂಲಿಂಗ್ ಕೊಟ್ಟಿದ್ದೇನೆ. ಇದರ ಅವಶ್ಯಕತೆ ಬರುವುದಿಲ್ಲ. ಕೆಳಗಿನ ಮನೆಯ ಬಗ್ಗೆ ನಾನು ಮಾತನಾಡುವುದಿಲ್ಲ. ಈಗ ಹಕ್ಕುಚ್ಯುತಿ ಬಗ್ಗೆ ಪತ್ರ ಬಂದಿದೆ. ಅದರ ಬಗ್ಗೆ ಏನು ಕ್ರಮ ಆಗಬೇಕೋ ಅದನ್ನು ಮಾಡುತ್ತೇವೆ. ಮಹಿಳಾ ಆಯೋಗದಿಂದ ದೂರು ಬಂದರೆ ಉತ್ತರ ಕೊಡುತ್ತೇನೆ. ಅವರು ನನ್ನ ಪ್ರಶ್ನೆ ಮಾಡಲು ಬರುವುದಿಲ್ಲ" ಎಂದು ತಿಳಿಸಿದರು.

"ಪೊಲೀಸರು ನನಗೆ ರಾತ್ರಿ 9 ಗಂಟೆಗೆ ಮಾಹಿತಿ ಕೊಟ್ಟಿದ್ದಾರೆ. ಆರೆಸ್ಟ್ ಮಾಡುವಾಗ ನನಗೆ ಮಾಹಿತಿ ಬಂದಿದೆ.

ವಿಧಾನಪರಿಷತ್ ಸದಸ್ಯರ ಮೇಲೆ ಹಲ್ಲೆಗೆ ಮುಂದಾದವರನ್ನು ಬಂಧಿಸಲು ಸೂಚಿಸಿದ್ದೇನೆ. ವಿಧಾನಪರಿಷತ್ ಮೊಗಸಾಲೆಯಲ್ಲಿ ದಾಳಿ ಮಾಡುತ್ತಾರೆ ಅಂದರೆ ಸರಿಯಲ್ಲ. ಹೀಗಾಗಿ, ಅವರನ್ನು ಬಂಧಿಸಲು ಸೂಚಿಸಿದ್ದೇನೆ" ಎಂದರು.



**ಪೊಲೀಸರು ಹಸ್ತಕ್ಷೇಪ ಮಾಡಿದರೆ ಕ್ರಮ:** "ಇದು ಮುಗಿದ ಅಧ್ಯಾಯ. ಎರಡ್ಮೂರು ಗಂಟೆಗಳ ಕಾಲ ಚರ್ಚೆ ಮಾಡಿದ್ದೇವೆ. ಆದಾದ ಬಳಿಕ ನಾನು ರೂಲಿಂಗ್ ಕೊಟ್ಟಿದ್ದೇನೆ. ಹೊರಗೆ ಆದ ಗದ್ದಲಕ್ಕೆ ನಾವು ಕ್ರಮ ತೆಗೆದುಕೊಳ್ಳಲು ಬರುವುದಿಲ್ಲ. ಆ ಗಲಾಟೆಗೂ ನಮ್ಮ ಸದನಕ್ಕೂ ಏನೇನೂ ಸಂಬಂಧವಿಲ್ಲ. ಹೊರಗಡೆ ಪೊಲೀಸ್ ಠಾಣೆಗೆ ದೂರು ಕೊಟ್ಟಿದ್ದಾರೆ. ಅದಕ್ಕೆ ಬಂಧನ ಮಾಡುವುದು, ಇನ್ನೊಂದು ಮತ್ತೊಂದು ಆಗಿದೆ. ಒಂದೇ ಒಂದು ವಿಚಾರ ಇಲ್ಲಿ ನಡೆದಿದೆ. ವಿಧಾನಪರಿಷತ್‌ನಲ್ಲಿ ಅದೆಲ್ಲ ಆಗಿದೆ ಅಂದಿದ್ದಾರೆ.

ಅದು ತಪ್ಪು. ಸದನದೊಳಗೆ ನಡೆದ ಪ್ರಕ್ರಿಯೆಗೆ ಪೊಲೀಸರು ಹಸ್ತಕ್ಷೇಪ ಮಾಡಬಾರದು. ಅವರು ಮಾಡಿದ್ರೆ ಆದರೆ ಪೊಲೀಸರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ" ಎಂದು ಇದೇ ವೇಳೆ ಸಭಾಪತಿ ತಿಳಿಸಿದರು.

"ಈ ಘಟನೆ ಮಧ್ಯಾಹ್ನ 1 ಘಂಟೆಗೆ ಆಗಿದೆ ಎಂದಿದ್ದಾರೆ. ವಿಧಾನಪರಿಷತ್ ಒಳಗೆ ಆದ ಘಟನೆಯ ಮೇಲೆ ಎಫ್ಐಆರ್ ಹಾಕಿದ್ದಾರೆ. ಹೀಗಾಗಿ ಅವರ ವಿರುದ್ಧ ಕ್ರಮ ಆಗುತ್ತದೆ. ಒಂದು ವೇಳೆ ಘಟನೆ ಆಗಿದೆ ಎನ್ನುವುದಾದರೆ ಎಫ್‌ಎಸ್‌ಎಲ್‌ಗೆ ಕಳುಹಿಸಿದ್ದೇವೆ. ಸದನ ನಡೆಯುವಾಗ ಆದ ಮಾತಿಗೆ ಮಾತ್ರ ಮನ್ನಣೆ. ಈಗ ಸಭಾಪತಿಯಾಗಿ ಕ್ರಮ ಏನು ಆಗಬೇಕು ಎಂಬುದನ್ನು ಚರ್ಚೆ ಮಾಡುತ್ತೇನೆ" ಎಂದರು.

ಸಿ.ಟಿ.ರವಿ ಜೊತೆ ಸಂಪರ್ಕದಲ್ಲಿದ್ದೆ: "ನಾನು ಅಂದು ರಾತ್ರಿ 1 ಗಂಟೆಯವರೆಗೂ ಸಿ.ಟಿ. ರವಿ ಜೊತೆಗೆ ಮಾತುಕತೆ ಮಾಡಿದ್ದೇನೆ. ಮೂರು ಬಾರಿ ಫೋನ್‌ನಲ್ಲಿ ಸಂಪರ್ಕ ಮಾಡಿದ್ದೇನೆ. ನಾನು ಕಮಿಷನರ್ ಹಾಗೂ ಎಸ್‌ಪಿ ಜೊತೆಗೆ ಮಾತುಕತೆ ಮಾಡಿದ್ದೇನೆ.

ಅಂದು ಎಸ್‌ಪಿ ಹಾಗೂ ಕಮಿಷನರ್‌ಗೆ ಕರೆ ಮಾಡಿ, ಸಿ.ಟಿ.ರವಿ ಅವರಿಗೆ ಏನೇ ಆದರೂ ನೀವೇ ಕಾರಣ ಎಂದು ತಿಳಿಸಿದ್ದೆ. ನಾನು ತಿಳಿಸಿದ್ದೆ ಎಂಬ ಕಾರಣಕ್ಕೆ ಅಂಕಲಗಿ ಠಾಣೆಗೆ ಅವರನ್ನು ಕರೆದುಕೊಂಡು ಬಂದಿದ್ದರು. ಯಾವ ಪಕ್ಷದವರೇ ಆದರೂ ಸರಿ, ಅವರ ಜವಾಬ್ದಾರಿ ನನ್ನದು. ಹೀಗಾಗಿ, ಪೊಲೀಸರಿಗೆ ಸೂಚನೆ ನೀಡಿದ್ದೇನೆ" ಎಂದು ಹೇಳಿದರು.

"ಫೇಕ್ ಎನ್‌ಕೌಂಟರ್ ಬಗ್ಗೆ ನಾನು ಹೇಳುವುದಿಲ್ಲ. ಅದು ಅವರ ಹೇಳಿಕೆ. ನಾನು ಇದಕ್ಕೆ ಉತ್ತರ ಕೊಡುವುದಿಲ್ಲ. ಇನ್ಮುಂದೆ ಒಳ್ಳೆಯ ಕಾಲ ಬರಲ್ಲ. ನಾನು ಕೂಡ ಒಳ್ಳೆಯ ಕಾಲದ ಅಂತ್ಯದಲ್ಲಿದ್ದೇನೆ. ನಿಮಗಾಗಲೀ, ನನಗಾಗಲೀ ಒಳ್ಳೆಯ ಕಾಲ ಬರುವುದಿಲ್ಲ. ಹುಡುಗರಿಗೆ ಹೆಚ್ಚು ಕ್ಲಾಸ್ ತೆಗೆದುಕೊಂಡರೂ ಪ್ರಯೋಜನ ಆಗಲ್ಲ" ಎಂದು ಸೂಚ್ಯವಾಗಿ ತಿಳಿಸಿದರು. ಮಹಿಳಾ ಆಯೋಗದ ದೂರು ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ಸಭಾಪತಿಗಳು ಹೇಳಿದ್ದಾರೆ.

ಮಹಿಳಾ ಆಯೋಗ ನನಗೆ ಪತ್ರ ಬರೆಯುವ ಅವಶ್ಯಕತೆ ಇಲ್ಲ. ಮಹಿಳಾ ಆಯೋಗದಿಂದ ನನಗೆ ಯಾವುದೇ ಪತ್ರ ಬಂದಿಲ್ಲ. ಮಹಿಳಾ ಆಯೋಗ ನನಗೆ ಸೂಚನೆ ಕೊಡಲು ಸಾಧ್ಯವಿಲ್ಲ ಆಯೋಗದ ದೂರು ನಮ್ಮ ವ್ಯಾಪ್ತಿಗೆ ಬರಲ್ಲ ಎಂದರು.

## ಮೊದಲ ಪುಟದಿಂದ

### ನಾನಿನ್ನು ಸತ್ತಿಲ್ಲ

ರಾಜ್ಯದಲ್ಲಿ ಏನೇ ನಡೆದರೂ ಡಿ.ಕೆ. ಶಿವಕುಮಾರ್ ಕಾರಣ ಎಂಬ ರೀತಿ ಬಿಂಬಿಸಲಾಗುತ್ತಿದೆ ಎಂದು ಕೇಳಿದಾಗ, "ನೀವು ಬಲಿಷ್ಠರಾಗಿದ್ದಷ್ಟು ಹೆಚ್ಚು ಶತ್ರುಗಳು. ನೀವು ಕಡಿಮೆ ಶಕ್ತಿಶಾಲಿಯಾದರೆ ಕಡಿಮೆ ಶತ್ರುಗಳು, ನೀವು ದುರ್ಬಲರಾಗಿದ್ದರೆ ಯಾವುದೇ ಶತ್ರುಗಳಿರುವುದಿಲ್ಲ. ಹೆಚ್ಚು ಕೆಲಸ ಮಾಡಿದಷ್ಟು ಹೆಚ್ಚು ತಪ್ಪುಗಳು, ಕಡಿಮೆ ಕೆಲಸ ಮಾಡಿದಷ್ಟು ಕಡಿಮೆ ತಪ್ಪುಗಳು, ಕೆಲಸಗಳೇ ಮಾಡದಿದ್ದರೆ ತಪ್ಪುಗಳೇ ಇರುವುದಿಲ್ಲ" ಎಂದು ತಿಳಿಸಿದರು.

"ಮಹಾತ್ಮಾ ಗಾಂಧಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ಆಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆ, ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ನೀಡಿದ್ದಾರೆ. ಇದೆಲ್ಲವೂ ಅವರ ನೇತೃತ್ವದ ಹೋರಾಟದ ಫಲ. ಇದೆಲ್ಲವನ್ನು ಉಳಿಸಿಕೊಂಡು ಸರಿಯಾದ ರೀತಿಯಲ್ಲಿ ಜಾರಿಯಲ್ಲಿಡಬೇಕು. ಗಾಂಧೀಜಿ ಅವರನ್ನು ದಿನನಿತ್ಯ ನೆನೆಯಬೇಕು ಎಂಬ ಕಾರಣಕ್ಕೆ ಮಹಾತ್ಮ ಗಾಂಧಿಜಿ ಅವರ ಭಾವಚಿತ್ರವನ್ನು ನೋಟುಗಳ ಮೇಲೆ ಮುದ್ರಣ ಮಾಡಲಾಗಿದೆ. ಮಹಾತ್ಮ ಎಂಬ ಹೆಸರು ಪಡೆದ ನಾಯಕನ ಸ್ಮರಣೆ ಮಾಡುವ ಆಚರಣೆ ವೇಳೆ ಪ್ರತಿಭಟನೆ ಮಾಡುತ್ತೇವೆ ಎಂದರೆ ನಾವು ಹೆದರುತ್ತೇವಾ?" ಎಂದು ಸವಾಲೆಸೆದರು. "ನಾನು ಜೋಷಿ ಅವರ ಹೇಳಿಕೆಗೆ ಉತ್ತರ ಕೊಡುವುದಿಲ್ಲ. ಅದಕ್ಕೆ ಗೃಹಸಚಿವರು, ಪೊಲೀಸರು ಉತ್ತರ ನೀಡುತ್ತಾರೆ" ಎಂದು ತಿಳಿಸಿದರು.

### ಕೈಗಾರಿಕಾ ಉದ್ಯಮ ಸ್ಥಾಪನೆಗೆ ಸರ್ಕಾರ ಒಪ್ಪಿಗೆ

ರಾಜ್ಯದಲ್ಲಿ ಏನೇ ನಡೆದರೂ ಡಿ.ಕೆ. ಶಿವಕುಮಾರ್ ಕಾರಣ ಎಂಬ ರೀತಿ ಬಿಂಬಿಸಲಾಗುತ್ತಿದೆ ಎಂದು ಕೇಳಿದಾಗ, "ನೀವು ಬಲಿಷ್ಠರಾಗಿದ್ದಷ್ಟು ಹೆಚ್ಚು ಶತ್ರುಗಳು. ನೀವು ಕಡಿಮೆ ಶಕ್ತಿಶಾಲಿಯಾದರೆ ಕಡಿಮೆ ಶತ್ರುಗಳು, ನೀವು ದುರ್ಬಲರಾಗಿದ್ದರೆ ಯಾವುದೇ ಶತ್ರುಗಳಿರುವುದಿಲ್ಲ. ಹೆಚ್ಚು ಕೆಲಸ ಮಾಡಿದಷ್ಟು ಹೆಚ್ಚು ತಪ್ಪುಗಳು, ಕಡಿಮೆ ಕೆಲಸ ಮಾಡಿದಷ್ಟು ಕಡಿಮೆ ತಪ್ಪುಗಳು, ಕೆಲಸಗಳೇ ಮಾಡದಿದ್ದರೆ ತಪ್ಪುಗಳೇ ಇರುವುದಿಲ್ಲ" ಎಂದು ತಿಳಿಸಿದರು.

"ಮಹಾತ್ಮಾ ಗಾಂಧಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ಆಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆ, ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ನೀಡಿದ್ದಾರೆ. ಇದೆಲ್ಲವೂ ಅವರ ನೇತೃತ್ವದ ಹೋರಾಟದ ಫಲ. ಇದೆಲ್ಲವನ್ನು ಉಳಿಸಿಕೊಂಡು ಸರಿಯಾದ ರೀತಿಯಲ್ಲಿ ಜಾರಿಯಲ್ಲಿಡಬೇಕು. ಗಾಂಧೀಜಿ ಅವರನ್ನು ದಿನನಿತ್ಯ ನೆನೆಯಬೇಕು ಎಂಬ ಕಾರಣಕ್ಕೆ ಮಹಾತ್ಮ ಗಾಂಧಿಜಿ ಅವರ ಭಾವಚಿತ್ರವನ್ನು ನೋಟುಗಳ ಮೇಲೆ ಮುದ್ರಣ ಮಾಡಲಾಗಿದೆ. ಮಹಾತ್ಮ ಎಂಬ ಹೆಸರು ಪಡೆದ ನಾಯಕನ ಸ್ಮರಣೆ ಮಾಡುವ ಆಚರಣೆ ವೇಳೆ ಪ್ರತಿಭಟನೆ ಮಾಡುತ್ತೇವೆ ಎಂದರೆ ನಾವು ಹೆದರುತ್ತೇವಾ?" ಎಂದು ಸವಾಲೆಸೆದರು. "ನಾನು ಜೋಷಿ ಅವರ ಹೇಳಿಕೆಗೆ ಉತ್ತರ ಕೊಡುವುದಿಲ್ಲ. ಅದಕ್ಕೆ ಗೃಹಸಚಿವರು, ಪೊಲೀಸರು ಉತ್ತರ ನೀಡುತ್ತಾರೆ" ಎಂದು ತಿಳಿಸಿದರು.

### ತನಿಖೆಗೆ ಆಗ್ರಹ

ನಾಡಿನ ಬಡ ಕುಟುಂಬಗಳ ತಾಯಂದಿರ ಪ್ರಾಣಗಳಿಗೆ ಕಾಂಗ್ರೆಸ್ ಸರ್ಕಾರ ಸಂಚಕಾರ ತಂದೊಡ್ಡಿದೆ. ಕಳೆದ 5 ದಿನಗಳ ಅಂತರದಲ್ಲಿ ಇಬ್ಬರು ಬಾಣಂತಿಯರು ಸಾವನ್ನಪ್ಪಿರುವುದು ನಿಜಕ್ಕೂ ರಾಜ್ಯವೇ ತಲೆತಗ್ಗಿಸುವಂತಾಗಿದೆ ಎಂದಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಕಳೆದ 6 ತಿಂಗಳಲ್ಲಿ 29 ಬಾಣಂತಿಯರು ಹಾಗೂ ಒಂದು ವರ್ಷದಲ್ಲಿ 322 ನವಜಾತ ಶಿಶುಗಳು ಮೃತಪಟ್ಟಿವೆ. ರಾಜ್ಯ ಸರ್ಕಾರ ಕೂಡಲೇ ಪ್ರಕರಣದ ಗಂಭೀರತೆಯನ್ನು ಅರಿತು ಉನ್ನತ ಮಟ್ಟದ ತನಿಖೆ ನಡೆಸಿ ಬಾಣಂತಿಯರ ಸಾವಿಗೆ ಕಾರಣ ಪತ್ತೆ ಮಾಡಿ ಬಡ ಕುಟುಂಬಗಳ ತಾಯಂದಿರ ಪ್ರಾಣ ಉಳಿಸುವ ನಿಟ್ಟಿನಲ್ಲಿ ತತ್‌ಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

### ಕಾನೂನು ಸಮರ

ಜನರು ಛೀಮಾರಿ ಹಾಕ್ತಿದ್ದಾರೆ. ಕಾನೂನು ಪ್ರಕಾರ ಪೊಲೀಸರ ಏನೂ ಮಾಡಬೇಕು ಮಾಡಿದ್ದಾರೆ. ಮೂಲ ಕಾರಣ ಏನೂ ಯಾವುದಕ್ಕೋಸ್ಕರ ಎಫ್ಐಆರ್ ಮಾಡಿದ್ದಾರೆ. ನಾಚಿಗೆ ಆಗಬೇಕು ನಿಮಗೆ ನಿಮ್ಮ ಮನೆಯಲ್ಲಿ ಹೆಣ್ಣು ಮಕ್ಕಳಿಲ್ವಾ?, ದೇವರ ಹತ್ರಾ ಹೋಗಿ ನಿಂತ್ಕೊಳ್ತಿರಿ ನಿಮಗೆ ನಾಚಿಗೆ ಆಗಬೇಕು. ಕಾನೂನು ಹೋರಾಟ ಮಾಡುತ್ತೇನೆ. ಪ್ರಧಾನಿ ಮೋದಿ, ರಾಷ್ಟ್ರಪತಿಗೆ ಪತ್ರ ಬರೆಯುತ್ತೇನೆ. ಅವಕಾಶ ಸಿಕ್ರೇ ಪ್ರಧಾನಿ ಮೋದಿಯವರನ್ನ ಭೇಟಿ ಆಗ್ತೇನಿ. ರಾಜಕಾರಣದಲ್ಲಿ ಹಿಂದಕ್ಕೆ ಸರಿಸಬೇಕು ಅಂತಾ ಮಾಡಿದ್ದಾರೆ ಎಂದು ಹೇಳಿದರು. ಘಟನೆ ಬಳಿಕ ಸಿ.ಟಿ.ರವಿ ಹಾರ ತುರಾಯಿ ಹಾಕಿಸಿಕೊಂಡು ವೈಭವಿಕರಿಸಿಕೊಳ್ಳುತ್ತಿದ್ದಾರೆ. ಅವರಿಗೆ ಅಪರಾಧಿ ಭಾವನೆ ಕಾಡುತ್ತಿದೆ. ನಾನು ಮತ್ತೆ ಸಭಾಪತಿ ಅವರಿಗೆ ದೂರು ಕೊಡುತ್ತೇನೆ. ಸಿ.ಟಿ. ರವಿ ವಿರುದ್ಧ ಹೋರಾಟ ಮುಂದುವರಿಸುವೆ. ಪೊಲೀಸ್ ತನಿಖೆ ಬೇಗ ಆಗಬೇಕು. ಎಫ್ ಎಸ್ ಎಲ್ ವರದಿ ಬೇಗ ಬಹಿರಂಗವಾಗಬೇಕು. ಇಂಥ ಸಂದರ್ಭದಲ್ಲೂ ಬಿಜೆಪಿಯವರು ಸಿ.ಟಿ ರವಿ ಬೆನ್ನಿಗೆ ನಿಂತಿದ್ದಾರೆ ಎಂದು ಸಚಿವರು ಕಿಡಿ ಕಾರಿದರು.

### ಪದ ಬಳಸಿದ್ದು ಸತ್ಯ

ಬಿಜೆಪಿಯವರಿಗೆ ಮಾನ ಮರ್ಯಾದೆ ಏನು ಇಲ್ಲ. ಹೀಗಾಗಿ ಅವರು ಸಿ.ಟಿ ರವಿ ಪರ ನಿಂತಿದ್ದಾರೆ. ಸಿಟಿ ರವಿಯನ್ನ ಪೊಲೀಸರು ಎನ್ ಕೌಂಟರ್ ಮಾಡಲು ಯತ್ನಿಸಿದರು, ಕೊಲೆ ಮಾಡುವ ಪ್ರಯತ್ನ ನಡೆದಿತ್ತು ಎಂಬುಂದೆಲ್ಲಾ ಶುದ್ಧ ಡ್ರಾಮಾ. ಬಿಜೆಪಿಯವರು ಈ ವಿಚಾರದಲ್ಲಿ ನೀಡುತ್ತಿರುವ ಹೇಳಿಕೆಗಳೆಲ್ಲ ಬರಿ ನಾಟಕ ಎಂದು ಹರಿಹಾಯ್ದರು.

### ಗೃಹ ಸಚಿವರು ಇದ್ದಾರಾ?

ಮಾಡಲು ಹೊರಟಿದ್ದಾರೆ. ಸಿ.ಟಿ.ರವಿ ಅವರನ್ನು ರಾತ್ರಿಯೆಲ್ಲಾ ಸುತ್ತಿಸಬೇಕಿತ್ತಾ? ಅವರು ಒಬ್ಬ ಜನಪ್ರತಿನಿಧಿ ಇದ್ದಾರೆ. ಬಂಧಿಸುವುದಿದ್ದರೆ ನೇರವಾಗಿ ಬೆಂಗಳೂರಿನ ಜನಪ್ರತಿನಿಧಿ ಕೋರ್ಟ್‌ಗೆ ಕರೆದುಕೊಂಡು ಬರಬಹುದಿತ್ತು. ರಾತ್ರಿಯೆಲ್ಲಾ ಸುತ್ತಿಸಬೇಕಾದ ಅವಶ್ಯಕತೆ ಏನಿತ್ತು? ಇದಕ್ಕೆಲ್ಲ ಯಾರು ಡೈರೆಕ್ಷನ್ ಕೊಟ್ಟವರು? ಬಿಜೆಪಿ ಸ್ನೇಹಿತರು ಸರಿಯಾದ ರೀತಿ ಕಾನೂನು ವ್ಯಾಪ್ತಿಯಲ್ಲಿ ಹೋರಾಟ ಮಾಡಿದರೆ ಅಧಿಕಾರಿಗಳೆಲ್ಲಾ ಸಸ್ಪೆಂಡ್ ಆಗುತ್ತಾರೆ. ಮಂತ್ರಿಯೊಬ್ಬರ ಚಿತಾವಣೆಯಿಂದ ಯಾವ ಅಧಿಕಾರಿಗಳು ಸಿ.ಟಿ.ರವಿಗೆ ಮಾನಸಿಕವಾಗಿ ಹಿಂಸೆ ಕೊಟ್ಟಿದ್ದಾರೆ ಅವರು ಅದರ ಪ್ರತಿಫಲ ಎದುರಿಸಬೇಕಾಗುತ್ತದೆ ಎಂದು ಅವರು ಹೇಳಿದರು.

ಸಚಿವ ಸತೀಶ್ ಜಾರಕಿಹೋಳಿ ಅವರು ಸಿ.ಟಿ.ರವಿ ಅವರನ್ನು ಕೋರ್ಟ್ ಮುಂದೆ ಹಾಜರುಪಡಿಸಿ ಎಂದು ಹೇಳಿದ್ದಾರೆ. ಇನ್ನೊಬ್ಬರು ಇನ್ನೊಂದು ಕಥೆ ಹೇಳುತ್ತಾರೆ. ಈ ರಾಜ್ಯದಲ್ಲಿ ಗೃಹ ಸಚಿವರು ಎನ್ನುವವರು ಇದ್ದಾರಾ? ಕಳೆದ ಆರೇಳು ತಿಂಗಳಿನಿಂದ ಹಲವಾರು ಪ್ರಕರಣಗಳು ಈ ರಾಜ್ಯದಲ್ಲಿ ನಡೆಯುತ್ತಿವೆ. ಕರ್ನಾಟಕಕ್ಕೆ ಭವಿಷ್ಯದಲ್ಲಿ ಅತ್ಯಂತ ಕೆಟ್ಟ ದಿನಗಳು ಕಾದಿವೆ. ರಾಜಕಾರಣದಲ್ಲಿ ವೈಷಮ್ಯ, ದ್ವೇಷ ಬೆಳೆಯಲು ಇವರು ಬೀಜ ಬಿತ್ತನೆ ಮಾಡಿದ್ದಾರೆ. ಮುಂದೆಯೂ ಸಹ ಇಂತಹುದೇ ಕೆಟ್ಟ ಪರಿಸ್ಥಿತಿ ಮುಂದುವರಿಯುತ್ತದೆ ಎನ್ನುವುದರಲ್ಲಿ ಯಾವುದೇ ಅನುಮಾನ ಬೇಡ ಎಂದು ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.

ರಾಜ್ಯದ ಪೊಲೀಸ್ ವ್ಯವಸ್ಥೆ ಇಡೀ ದೇಶಕ್ಕೆ ಮಾದರಿ ಆಗಿತ್ತು. ನಮ್ಮ ಪೂರ್ವಿಕರು ರಾಜ್ಯದಲ್ಲಿ ಉತ್ತಮ ವಾತಾವರಣ, ವ್ಯವಸ್ಥೆಯನ್ನು ರೂಪಿಸಿದ್ದರು. ಕರ್ನಾಟಕ ಪೊಲೀಸ್ ಎಂದರೆ ದೇಶದಲ್ಲಿಯೇ ಗೌರವ ಇತ್ತು. ದುರದೃಷ್ಟ ಎಂದರೆ, ಅದೆಲ್ಲವನ್ನೂ ಸರ್ವನಾಶ ಮಾಡಲು ಈ ಸರಕಾರ ಹೊರಟಿದೆ. ಪೊಲೀಸರ ಗೌರವವನ್ನು ಮಣ್ಣುಪಾಲು ಮಾಡುವ ನಿಟ್ಟಿನಲ್ಲಿ ಇವರು ಕೆಲಸ ಮಾಡುತ್ತಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವ ವಿನಯ್ ಕುಲಕರ್ಣಿ ಅವರ ಪ್ರಕರಣವನ್ನು ಏನು ಮಾಡಿದಿರಿ? ಕಾಂಗ್ರೆಸ್ ನಾಯಕ ಗುರಪ್ಪ ನಾಯ್ಡು ಮೇಲೆ ಶಿಕ್ಷಕರೊಬ್ಬರು ದೂರು ಕೊಟ್ಟರಲ್ಲ, ಆ ದೂರು ಏನಾಯಿತು? ರಾಜ್ಯದಲ್ಲಿ ಏನೇನು ನಡೆಯುತ್ತಿದೆ ಎಂಬುದನ್ನು ಗಮನಿಸುತ್ತಿದ್ದೇನೆ. ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ರಾಜಕೀಯ ವಿರೋಧಿಗಳಿಗೆ ಹೇಗೆಲ್ಲಾ ಕಿರುಕುಳ ನೀಡಲಾಗುತ್ತಿದೆ ಎಂಬುದನ್ನು ನಾನು ಬಲ್ಲೆ. ಕರ್ನಾಟಕದಲ್ಲಿ ಮುಂದಿನ ದಿನಗಳಲ್ಲಿ ರಾಜಕಾರಣ ಯಾವ ರೀತಿ ಹೋಗಬಹುದು ಎನ್ನುವುದಕ್ಕೆ ಕಾಂಗ್ರೆಸ್‌ನವರು ವೇದಿಕೆ ಸಿದ್ಧ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವರು ಬೇಸರ ವ್ಯಕ್ತಪಡಿಸಿದರು.

ನಾನು ಸಂಪೂರ್ಣವಾಗಿ ಪೊಲೀಸ್ ಇಲಾಖೆಗೆ ದೋಷ ಕೊಡಲು ಹೋಗುವುದಿಲ್ಲ. ಇವತ್ತು ಸರಕಾರದಲ್ಲಿರುವ ಮಂತ್ರಿಗಳು ಕೆಲವು ಆಯ್ದ ಪೊಲೀಸ್ ಅಧಿಕಾರಿಗಳಿಗೆ ಡೈರೆಕ್ಷನ್ ಕೊಡುವ ಮೂಲಕ ಇಲಾಖೆಯಲ್ಲಿ ಕಾನೂನು ಬಾಹಿರ ತೀರ್ಮಾನಗಳಾಗುತ್ತಿವೆ. ತಮಗೆ ಬೇಕಾದಂತೆ ಕೇಸ್‌ಗಳನ್ನು ಬುಕ್ ಮಾಡುತ್ತಿದ್ದಾರೆ. ಯಾವ ರೀತಿ ಅವರ ವಿರೋಧಿಗಳನ್ನು ಸದೆಬಡೆಯಬೇಕೆಂದು ಅಧಿಕಾರ ದುರುಪಯೋಗ, ಕಾನೂನಿನ ಉಲ್ಲಂಘನೆ ಎಂಬುದು ಸರಕಾರದಿಂದಲೇ ಆಗುತ್ತಿದೆ. ನಾನು ಈಗಷ್ಟೇ ದೇವಸ್ಥಾನದಲ್ಲಿ ಪೂಜೆ ಮಾಡಿ ಬಂದು ನಿಂತು ಹೇಳುತ್ತಿದ್ದೇನೆ, ಕಾಲವೇ ಇದಕ್ಕೆಲ್ಲ ಉತ್ತರ ಕೊಡುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಕಲ್ಬುರ್ಗಿಯಲ್ಲಿ ಸಿಎಂ ಅವರು ಜಯದೇಶ ಆಸ್ಪತ್ರೆ ಉದ್ಘಾಟನೆ ಮಾಡಿದ್ದಾರೆ, ಆ ಆಸ್ಪತ್ರೆಗೆ ಏನಿದೆ ಅವರ ಕೊಡುಗೆ? ನಾನು ಸಿಎಂ ಆಗಿದ್ದಾಗ ಅದಕ್ಕೆ ಚಾಲನೆ ಕೊಟ್ಟಿದ್ದೆ. ನಂತರ ಬಂದ ಬಿಜೆಪಿ ಸರಕಾರ □128 ಕೋಟಿ ಹಣ ಬಿಡುಗಡೆ ಮಾಡಿತ್ತು. ಜಯದೇವ ಆಸ್ಪತ್ರೆಯಿಂದ ಡಾ.ಸಿ.ಎನ್.ಮಂಜುನಾಥ್ ಅವರು □40 ಕೋಟಿ ಸಂಗ್ರಹಿಸಿ ಹೂಡಿಕೆ ಮಾಡಿದ್ದರು. ಹಿಂದೆ ಕೆಲಸ ಮಾಡಿರುವವರನ್ನು ನೆನಪಿಸಿಕೊಳ್ಳುವಂತಹ ಕೃತಜ್ಞತೆ ಇಲ್ಲದಂತಹ ಅನಾಗರೀಕ ಸರಕಾರ ಇದು. ಇವರ ಕೊಡುಗೆ ಏನೂ ಇಲ್ಲ. ಈಗ ನೋಡಿದರೆ ನಿಮ್ಹಾನ್ಸ್ ಮಾಡ್ತಾರಂತೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು.

ಸದ್ಯಕ್ಕೆ ಇರುವ ಆಸ್ಪತ್ರೆಗಳನ್ನೇ ನೆಟ್ಟಗೆ ಇಟ್ಟುಕೊಂಡಿಲ್ಲ. ಉತ್ತರ ಕರ್ನಾಟಕದಲ್ಲಿ ಪ್ರತಿನಿತ್ಯ ಬಾಣಂತಿಯರು, ಮಕ್ಕಳ ಸರಣಿ ಸಾವು ಮುಂದುವರಿದೆ. ಬಹಳ ನೋವಾಗುತ್ತದೆ. ಇದನ್ನೆಲ್ಲಾ ತಡೆಯಲು ಏನು ಕ್ರಮ ತೆಗೆದುಕೊಂಡಿದ್ದೀರಿ. ಆಸ್ಪತ್ರೆಗಳಲ್ಲಿ ವೈದ್ಯರು, ಸಿಬ್ಬಂದಿ ಕೊರತೆ ಇದೆ. ನೀವು ರಾಜ್ಯ ಕಟ್ಟುತ್ತೀರಾ? ಎಂದು ಅವರು ಅವರು ಹೇಳಿದರು.

### ಕಾನೂನು ಕ್ರಮಕ್ಕೆ ಒತ್ತಾಯ

ಸಿ.ಟಿ.ರವಿ ಅವರು ಅಸಾಂವಿಧಾನಿಕ ಪದಬಳಕೆ ಮಾಡಿರುವುದು ಸದನದ ಇತಿಹಾಸಕ್ಕೆ ಕಪ್ಪುಚುಕ್ಕೆಯಾಗಿದೆ. ಸಿ.ಟಿ.ರವಿ ಅವರ ವಿರುದ್ಧ ಅಗತ್ಯ ಕಾನೂನು ಕ್ರಮಕೈಗೊಳ್ಳಬೇಕು" ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ವತಿಯಿಂದ ಶಾಮನೂರು ಶಿವಶಂಕರಪ್ಪ ಸರ್ಕಾರವನ್ನು ಒತ್ತಾಯಿಸಿದ್ದಾರೆ.

### ಪ್ರಕರಣ ದಾಖಲು

ಅಡಿಯಲ್ಲಿ ದೂರನ್ನು ದಾಖಲಿಸಲಾಗಿದೆ. ವಿಧಾನ ಪರಿಷತ್ತಿನಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಸಿ.ಟಿ.ರವಿ ಅವರ ಆಕ್ಷೇಪಾರ್ಹ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಈ ಘಟನೆ ನಡೆದಿದೆ ಎನ್ನಲಾಗಿದೆ.ಆರಂಭಿಕವಾಗಿ ಸಿ.ಟಿ.ರವಿ ಅವರ ದೂರು ಸ್ವೀಕರಿಸದ ಹಿನ್ನೆಲೆಯಲ್ಲಿ ಬಿಜೆಪಿ ಮುಖಂಡರಾದ ಎಂಎಲ್ಸಿ ಡಿ.ಎಸ್.ಅರುಣ್, ಪ್ರೊ.ಎಸ್.ವಿ.ಸಂಕನೂರ ಅವರು ಈ ಹಿಂದೆ ಗೃಹ ಇಲಾಖೆ ಕಾರ್ಯದರ್ಶಿಗೆ ದೂರು ನೀಡಿದ್ದರು. ಅಂತಿಮವಾಗಿ ಕಿಶೋರ ಬಿ.ಆರ್ ಅವರು ನೀಡಿರುವ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದೆ.

### ಮೂವರಿಗೆ ಗಾಯ

ತೆರಳುತ್ತಿತ್ತು, ಗೋವಾದಿಂದ ಹುಬ್ಬಳ್ಳಿಗೆ ಟಿಟಿ ವಾಹನ ಬರುತ್ತಿತ್ತು. ಕ್ಯಾಂಟರ್ ವಾಹನ ಕಡಬಗಟ್ಟಿ ಗ್ರಾಮದ ಹೊರವಲಯದ ಬಳಿ ಪಲ್ಟಿಯಾಗಿ ಟಿಟಿಗೆ ಡಿಕ್ಕಿ ಹೊಡೆದಿದೆ. ಪುಟ 2

ಪರಿಣಾಮ ಕ್ಯಾಂಟರ್ ವಾಹನದಲ್ಲಿದ್ದ ಮೂವರು ಮೃತಪಟ್ಟಿದ್ದಾರೆ. ಓರ್ವನಿಗೆ ಗಾಯಗಳಾಗಿವೆ. ಟಿಟಿ ವಾಹನದಲ್ಲಿನ ಇಬ್ಬರು ಪ್ರಯಾಣಿಕರು ಸಹ ಗಾಯಗೊಂಡಿದ್ದಾರೆ. ಮೂವರು ಗಾಯಾಳುಗಳನ್ನು ಹುಬ್ಬಳ್ಳಿ ಕಿಮ್ಸ್‌ಗೆ ರವಾನಿಸಲಾಗಿದೆ.

### ಪ್ರಮಾಣಪತ್ರ ಕಡ್ಡಾಯವಲ್ಲ

ಇದ್ದಂತೆ, ಪಕ್ಷ ಯಾವುದೇ ಇರಬಹುದು, ಆದರೆ ಅವರ ಟೀಕೆ ಸಹಿಸುವಂಥದ್ದಲ್ಲ, ಇದನ್ನು ಹೊರದೇಶಗಳು ಗಮನಿಸುತ್ತಿದೆ, ಭಾರತ ದೇಶ ಯಾವ ದೆಸೆಯಲ್ಲಿ ಸಾಗುತ್ತಿದೆ, ಅಂಬೇಡ್ಕರ್ ಅವರ ಸಂವಿಧಾನ ಎಲ್ಲಾ ಧರ್ಮಗಳಿಗೂ ಪವಿತ್ರ ಗ್ರಂಥವಾಗಿದೆ ಎಂದು ಹೇಳಿದರು.

### ಸಭಾಪತಿ ತೀರ್ಮಾನ

ಹಿಂಸೆ ನೀಡಿರುವುದು ಯಾವುದೇ ನಾಗರಿಕ ಸರ್ಕಾರಕ್ಕೆ ಗೌರವ ತರುವುದಿಲ್ಲ ಎಂದರು.

ನೆಲಮಂಗಲದ ಸಮೀಪ ರಾಷ್ಟ್ರೀಯ ಹೆದ್ದಾರಿಯಲ್ಲಿ ಟ್ರಕ್ ಕಾರಿನ ಮೇಲೆ ಬಿದ್ದು ಸಂಭವಿಸಿದ ಭೀಕರ ಅಪಘಾತದ ಬಗ್ಗೆ ಪ್ರತಿಕ್ರಿಯಿಸಿದ ಸಚಿವ ಸೋಮಣ್ಣ ಅವರು, ಬೆಂಗಳೂರು ಮತ್ತು ತುಮಕೂರು ನಡುವೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಓಡಾಡುತ್ತಿದ್ದ ವೇಳೆ ಆದಂತಹ ತೊಂದರೆಗಳನ್ನು ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರ ಬಳಿ ಹೇಳಿದ್ದೇನೆ. ಅಲ್ಲದೆ ಈ ಕುರಿತು ಸವಿಸ್ತಾರವಾಗಿ ಪತ್ರವನ್ನು ಸಹ ಬರೆದಿದ್ದೇನೆ. ಎಷ್ಟು ಕಾಮಗಾರಿ ಆಗಿವೆ ಎಂಬುದರ ಬಗ್ಗೆಯೂ ತಿಳಿಸಿದ್ದೇನೆ ಎಂದರು.

ಕಳೆದ ಮೂರು ವರ್ಷದಲ್ಲಿ ಈ ಹೆದ್ದಾರಿಯಲ್ಲಿ 256 ಜನ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಇದುವರೆಗೂ ಎಲ್ಲಿ ಅಪಘಾತಗಳು ಆಗುತ್ತಿದ್ದವೋ ಅದೇ ಸ್ಥಳದಲ್ಲಿ ಪದೇ ಪದೇ ಅಪಘಾತಗಳು ಸಂಭವಿಸುತ್ತಿವೆ. ಈ ಬಗ್ಗೆಯೂ ಕೇಂದ್ರ ಸಚಿವರಿಗೆ ವರದಿ ನೀಡಲಾಗಿದೆ ಎಂದು ಅವರು ಹೇಳಿದರು.

ಜನವರಿ 2 ರಿಂದ ನೆಲಮಂಗಲದಿಂದ ತುಮಕೂರಿನ ಊರುಕೆರೆ ವರೆಗೆ 6 ಪಥದ ರಸ್ತೆ ಕಾಮಗಾರಿ ಪ್ರಾರಂಭವಾಗಲಿದೆ. ಯುದ್ಧೋಪಾದಿಯಲ್ಲಿ ಕಾಮಗಾರಿ ನಡೆಸಿ ಮುಂದಿನ ನಾಲ್ಕೈದು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಒತ್ತಡ ಹೇರಿದ್ದೇನೆ ಎಂದರು.

ನೆಲಮಂಗಲದಿಂದ 45 ಕಿ.ಮೀ. ಹೊರಗಿನ ರಸ್ತೆಗೆ 2046 ಕೋಟಿ ರೂ. ಅನುಮೋದನೆ ದೊರೆತಿದೆ. ಆದರೆ ಕಾಮಗಾರಿ ಅರ್ಧಕ್ಕೆ ನಿಂತಿದೆ. ಈ ಕಾಮಗಾರಿ ಮಾಡುತ್ತಿದ್ದ ಗುತ್ತಿಗೆದಾರ ಅರ್ಧಕ್ಕೆ ಬಿಟ್ಟು ಹೋಗುವ ಸ್ಥಿತಿಯಲ್ಲಿದ್ದನು. ಈ ಬಗ್ಗೆಯೂ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರ ಗಮನಕ್ಕೆ ತಂದಿದ್ದೇವೆ. ಅವರು ಗುತ್ತಿಗೆದಾರನನ್ನು ಕರೆಸಿ ಮಾತನಾಡಿದ್ದಾರೆ. ಶೀಘ್ರದಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದರು.

## ಶಾ ವಿರುದ್ಧ ದೇಶ ದ್ರೋಹ ಪ್ರಕರಣ ದಾಖಲಿಸಲು ಆಗ್ರಹ

ಶಿಡ್ಲಘಟ್ಟ : ಸಂಸತ್‌ನ ಅಧಿವೇಶನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಬಗ್ಗೆ ಹಗುರವಾಗಿ ಮಾತನಾಡಿರುವ ಕೇಂದ್ರದ ಗೃಹ ಮಂತ್ರಿ ಅಮಿತ್ ಶಾ ಅವರು ದೇಶದ ಜನರ ಕ್ಷಮೆ ಕೇಳಬೇಕು, ಅವರ ವಿರುದ್ಧ ದೇಶ ದ್ರೋಹ ಪ್ರಕರಣ ದಾಖಲಿಸುವಂತೆ ಆಗ್ರಹಿಸಿ ದಲಿತ ಸಂಘರ್ಷ ಸಮಿತಿಯ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ದೆಹಲಿಯ ಸಂಸತ್‌ನ ಅಧಿವೇಶನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಬಗ್ಗೆ ಹಗುರವಾಗಿ ಮಾತನಾಡಿರುವ ಕೇಂದ್ರದ ಗೃಹ ಮಂತ್ರಿ ಅಮಿತ್ ಶಾ ಅವರು ದೇಶದ ಜನರ ಕ್ಷಮೆ ಕೇಳಬೇಕು, ಅವರ ವಿರುದ್ಧ ದೇಶ ದ್ರೋಹ ಕೇಸು ದಾಖಲಿಸುವಂತೆ ಆಗ್ರಹಿಸಿ ದಲಿತ ಸಂಘರ್ಷ ಸಮಿತಿಯ ಕಾರ್ಯಕರ್ತರು ತಾಲ್ಲೂಕು ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಅಮಿತ್ ಶಾ ಅವರ ಭಾವಚಿತ್ರಕ್ಕೆ ಚಪ್ಪಲಿ ಹಾರ ಹಾಕಿ, ಅವರ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ದಸಂಸ ತಾಲ್ಲೂಕು ಸಂಚಾಲಕ ತಾತಹಳ್ಳಿ ಚಲಪತಿ ಮಾತನಾಡಿ ಸಂಸತ್‌ನಲ್ಲಿ ನಡೆಯುತ್ತಿರುವ ಚಳಿಗಾಲದ ಅವೇಶನದಲ್ಲಿ ಕೇಂದ್ರದ ಗೃಹ ಮಂತ್ರಿ ಅಮಿತ್ ಶಾ ಅವರು ಮಾತನಾಡಿ ಅಂಬೇಡ್ಕರ್, ಅಂಬೇಡ್ಕರ್ ಎಂದು ದಿನಾಲು ಜಪಿಸುವ ಬದಲಿಗೆ ನಿಮ್ಮ ಮನೆ ದೇವರನ್ನಾದರೂ ಸ್ಮರಿಸಿದ್ದರೆ ಸ್ವರ್ಗವಾದರೂ ಪ್ರಾಪ್ತಿಯಾಗುತ್ತಿತ್ತು ಎಂದು ಹೇಳುವ ಮೂಲಕ ಅಂಬೇಡ್ಕರ್ ಬಗ್ಗೆ ಅವರಲ್ಲಿನ ಅಸಹನೆಯನ್ನು ಪ್ರದರ್ಶಿಸಿದ್ದಾರೆ ಎಂದು ಆರೋಪಿಸಿದರು.




ಜಗತ್ತಿನಲ್ಲೇ ಅತ್ಯಂತ ಶ್ರೇಷ್ಠವಾದ, ಬಲಿಷ್ಠವಾದ ಮತ್ತು ಶೋಷಣೆಗೆ ಒಳಗಾದವರು, ವಂಚಿತರಿಗೆ ಬೆಳಕಾದಂತಹ ಸಂವಿಧಾನವನ್ನು ಕೊಟ್ಟಂತಹ ಅಂಬೇಡ್ಕರ್ ಅವರ ಬಗ್ಗೆ ಅನೇಕರಿಗೆ ಇಂದಿಗೂ ಅಸಹನೆಯಿದ್ದು ಅಮಿತ್ ಶಾ ಅವರು ಅದನ್ನು ಹೊರ ಹಾಕಿದ್ದಾರೆ ಅಷ್ಟೆ ಎಂದರು.

ಇತ್ತೀಚಿನ ದಿನಗಳಲ್ಲಿ ಅಂಬೇಡ್ಕರ್ ಅವರ ಬಗ್ಗೆ ಕೀಳಾಗಿಯೋ, ಅವಹೇಳನಕಾರಿಯಾಗಿಯೋ ಮಾತನಾಡುವುದು ಬಿಜೆಪಿಯವರಿಗೆ ಪ್ಯಾಷನ್ ಆಗಿಬಿಟ್ಟಿದೆ ಎಂದು ಬೇಸರ ವ್ಯಕ್ತಪಡಿಸಿದರು.

ದೇಶಕ್ಕೆ ಸಂವಿಧಾನವನ್ನು ಕೊಟ್ಟಂತಹ ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡುವುದು ದೇಶ ದ್ರೋಹದಂತ ಕೆಲಸವಾಗಿದ್ದು ಅಮಿತ್ ಶಾ ಅವರ ಮೇಲೆ ದೇಶ ದ್ರೋಹದ ಕೇಸು ದಾಖಲಿಸಬೇಕು ಎಂದು ಒತ್ತಾಯಿಸಿದರು.

ಅಮಿತ್ ಶಾ ಅವರ ಭಾವಚಿತ್ರಕ್ಕೆ ಚಪ್ಪಲಿ ಹಾರ ಹಾಕಿ ತಮ್ಮಲ್ಲಿನ ಆಕ್ರೋಶವನ್ನು ವ್ಯಕ್ತಪಡಿಸಿದರು,ಗ್ರೇಡ್ –2 ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಘಟನಾ ಸಂಚಾಲಕ ಎನ್.ಎ.ವೆಂಕಟೇಶ್, ಲಕ್ಕೇನಹಳ್ಳಿ ವೆಂಕಟೇಶ್, ಗಂಗಾಧರ್, ಹುಜಗೂರು ವೆಂಕಟೇಶ್, ಖಜಾಂಚಿ ರಾಜ್‌ಕುಮಾರ್,ಮುನಿಕೃಷ್ಣಪ್ಪ, ದೊಡ್ಡ ತಿರುಮಳಯ್ಯ ಹಾಗು ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಜಿಲ್ಲಾ ವಕೀಲರ ಸಂಘದಿಂದ ಪ್ರತಿಭಟನೆ

ಚಾಮರಾಜನಗರ.: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ರವರ ವಿರುದ್ಧ ಜಿಲ್ಲಾ ನ್ಯಾಯಾಲಯದಲ್ಲಿ ವಕೀಲರು ಪ್ರತಿಭಟನೆ ನಡೆಸಿದರು.

ಚಾಮರಾಜನಗರದ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ವಕೀಲರ ಸಂಘದ ಸಭಾಂಗಣದಲ್ಲಿ ಸಭೆ ಯದ ಕಲಾಪದಿಂದ ಹೊರಗುಳಿದು ಪ್ರತಿಭಟನೆ ನಡೆಸಿದರು.

ಬಳಿಕ ಅಲ್ಲಿಂದ ಜಿಲ್ಲಾಡಳಿತ ಭವನಕ್ಕೆ ತೆರಳಿ ತೆರಳಿ ಕೆಲಕಾಲ ಪ್ರಭಟನೆ ನಡೆಸಿದದ ಜಿಲ್ಲಾ ವಕೀಲರ ಸಂಘ ಚಾಮರಾಜನಗರ ಎಡಿಸಿ ಗೀತಾ ಹುಡೇದ ಅದರ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ದೊಡ್ಡಮೋಳೆ ರಂಗಸ್ವಾಮಿ ಮಾತನಾಡಿ, ಅವರು ಕೂಡಲೇ ಸಚಿವ ಸ್ಥಾನಕ್ಕೆ ರಾಜನಾದು ನೀಡಬೇಕು. ಇದೊಂದು ದೇಶಕ್ಕೆ ಮಾಡಿದ ಅಪಮಾನವಾಗಿದೆ. ಅಮಿತ್ ಶಾ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು ಎಂದು ಮನವಿ ಮಾಡಿದರು

ಪ್ರತಿಭಟನೆಯಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ನಂಜಯ್ಯ, ವಕೀಲರಾದ ದಲಿತ್ ರಾಜ್, ನೋಟರಿ ನಾಗಣ್ಣ, ಮಾದೇಶ್, ಪೃಥ್ವಿ ನಗರಯ್ಯನ ಮಲ್ಲು ಸೇರಿದಂತೆ ಹಿರಿಯರು ಹಾಗೂ ಹಾಗೂ ಇತರರು ಹಾಜರಿದ್ದರು.




## ಸುದ್ದಿ ಸಂಜೆ

### ವಿಜೃಂಭಣೆಯಿಂದ ನಡೆದ ಹನುಮ ಜಯಂತಿ


**ಚಾಮರಾಜನಗರ:** ನಗರದಲ್ಲಿ ಹನುಮ ಜಯಂತ್ಯೋತ್ಸವ ಕಾರ್ಯಕ್ರಮ ವಿಜೃಂಭಣೆಯಿಂದ ನಡೆಯಿತು.

ಅಭಯಹಸ್ತ ಅಂಜನೇಯ ದೇವಾಲಯದಿಂದ ಹೊರಟ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ನಗಾರಿ, ವೀರಗಾಸೆ, ಡೊಳ್ಳುಕುಣಿತ, ನಗಾರಿ ನಂದಿಧ್ವಜ ಸೇರಿದಂತೆ ವಿವಿದ ಕಲಾತಂಡಗಳು ಭಾಗವಹಿಸಿದ್ದವು.

ಮೆರವಣಿಗೆಯಲ್ಲಿ ಯಾವ್ದೆ ಅಹಿತಕರ ಘಟನೆ ನಡೆಯದಂತೆ 200ಕ್ಕೂ ಹೆಚ್ಚು ಆರಕ್ಷಕರು ನಿಯೋಜಿಸಿ ಸ್ವತಃ ಎಸ್ಪಿ ಕವಿತಾ ಅವರೇ ಖುದ್ದು ನಿಂತು ಮೆರವಣಿಗೆಯಲ್ಲಿ ಬಂದೂಬಸ್ತ್ ನೇತೃತ್ವ ವಹಿಸಿದ್ದರು.

### ಲೋಕಾಯುಕ್ತ ಬಲೆಗೆ ಬಿದ್ದ ಸಹಕಾರಿ ಉಪ ನಿಬಂಧಕ

**ಕೊಪ್ಪಳ :** ಜಿಲ್ಲೆಯ ಸಹಕಾರಿ ಇಲಾಖೆಯ ಉಪ ನಿಬಂಧಕ ದಸ್ತಗೀರ್ ಅಲಿ ಲಂಚ ಪಡೆಯುವ ವೇಳೆ ಲೋಕಾಯುಕ್ತ ಅಧಿಕಾರಿಗಳು ಖೇಡ್ಡಾಗೆ ಕೆಡವಿದ್ದಾರೆ.



ನಗರದ ಸಹಕಾರಿ ಸಂಘಗಳ ಉಪ ನಿಬಂಧಕ ದಸ್ತಗೀರ್ ಅಲಿ ಎನ್ ಜಿ ಓ ಒಂದರ ನೋಂದಣಿ ಮಾಡಿಸಲು ಬಂದಿದ್ದ ಭೀಮನ ಗೌಡ ಎಂಬುವರಿಗೆ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಲೋಕಾಯುಕ್ತಕ್ಕೆ ಭೀಮನಗೌಡ ದೂರು ನೀಡಿದ್ದರು. ಶನಿವಾರ ಎರಡು ಸಾವಿರ ರೂ ನಗದು ಲಂಚ ಸ್ವೀಕರಿಸುವ ವೇಳೆ ಅಧಿಕಾರಿ ದಸ್ತಗೀರ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಈ ಸಂದರ್ಭದಲ್ಲಿ ಹಣವನ್ನು ನುಂಗಲು ಯತ್ನಿಸಿದ್ದಾನೆ ಎನ್ನಲಾಗಿದೆ.

ಜಿಲ್ಲಾಡಳಿತ ಭವನದ ಸಹಕಾರಿ ಸಂಘಗಳ ಇಲಾಖೆಯ ಕಚೇರಿಯಲ್ಲಿಯೇ ಭ್ರಷ್ಟ ಅಧಿಕಾರಿ ಲಂಚ ಪಡೆಯುವ ವೇಳೆ ಲೋಕಾಯುಕ್ತರ ಬಲೆಗೆ ಬಿದ್ದಿದ್ದಾರೆ. ರಾಯಚೂರು ಲೋಕಾಯುಕ್ತ ಎಸ್ ಪಿ ಶಶಿಧರ್, ಕೊಪ್ಪಳ ಲೋಕಾಯುಕ್ತ ಪಿ ಐ ನಾಗರತ್ನ, ಸುನಿಲ್ ಮೇಗಿಲಮನಿ ದಾಳಿ ಮಾಡಿ ಅಧಿಕಾರಿಯನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸಿದ್ದಾರೆ.

### ಕರ್ತವ್ಯ ಲೋಪ ಹಿನ್ನೆಲೆ ಗ್ರೇಡ್ 2 ತಹಸೀಲ್ದಾರ್ ಸಸ್ಪೆಂಡ್

**ಮುಳಬಾಗಿಲು:** ಸರ್ಕಾರಿ ಕರ್ತವ್ಯ ನಿರ್ಹಣೆಯಲ್ಲಿ ಬೇಜವಬ್ದಾರಿತನ ಹಾಗೂ ಕರ್ತವ್ಯಲೋಪ ಹಿನ್ನೆಲೆಯಲ್ಲಿ ಮುಳಬಾಗಲು ಗ್ರೇಟ್–2 ತಹಶೀಲ್ದಾರ್ ಸೇವೆಯಿಂದ ಅಮಾನತು ಮಾಡಲಾಗಿದೆ.

ಬಿ.ಆರ್.ಮುನಿವೆಂಕಟಪ್ಪ ಸೇವೆಯಿಂದ ಅಮಾನತ್ತಾದ ಮುಳಬಾಗಲು ಗ್ರೇಟ್–2 ತಹಶೀಲ್ದಾರ್ ಆಗಿದ್ದು, ಇವರನ್ನ ಸೇವೆಯಿಂದ ಅಮಾನತು ಮಾಡಿ ಆದೇಶ ಹೊರಡಿಸಿದ ಕಂದಾಯ ಇಲಾಖೆ ಪ್ರಾದೇಶಿಕ ಆಯುಕ್ತ ಚಳ್ಳಕೆರೆ ತಾಲ್ಲೂಕಿಗೆ ವರ್ಗಾವಣೆ ಮಾಡಿ ಆದೇಶ ಹೊರಡಿಸಿದ್ದಾರೆ.

ಸಿವಿಲ್ ನ್ಯಾಯಾಲಯದಲ್ಲಿ ವಿಚಾರಣೆ ಇದ್ದಾಗಲೆ ವಿವಾದಿತ ಜಮೀನಿನ ಪ್ರಕರಣಕ್ಕೆ ಆದೇಶ ನೀಡಿರುವುದು, ಅಧಿಕಾರ ವ್ಯಾಪ್ತಿ ಮೀರಿ ಕಾರ್ಯ ನಿರ್ವಹಣೆ ಮಾಡಿ ಆದೇಶ ನೀಡಿರುವ ಅಧಿಕಾರಿಯನ್ನ ಅಮಾನತು ಮಾಡಲಾಗಿದೆ. ಅಲ್ಲದೆ ಕೆಲವು ನಿರ್ಧಿಷ್ಟ ಪ್ರಕರಣಗಳಲ್ಲಿ ಕೋಲಾರ ಉಪ ವಿಭಾಗಾಧಿಕಾರಿ ಸೂಚನೆ ಮೇರಗೆ ಪಹಣಿಯಲ್ಲಿ ನಮೂದು ಮಾಡದೆ ಬೇಜವಬ್ದಾರಿತನ ತೋರಿರುವ ತಹಶೀಲ್ದಾರ್ ಹಾಗು ತಡೆಯಾಜ್ಞೆ ಇದ್ದರು ಕೆಲವು ಪ್ರಕರಣಗಳಲ್ಲಿ ಅಧಿಕಾರ ಮೀರಿ ಆದೇಶ ನೀಡಿರುವ ಬಿ.ಆರ್.ಮುನಿವೆಂಕಟಪ್ಪ ಅಮನಾತು ಮಾಡಿ ಆದೇಶ ಹೊರಡಿಸಿರುವ ಕಂದಾಯ ಇಲಾಖೆಯ ಆಯುಕ್ತರು ಹಾಗೂ ಶಿಸ್ತು ಪ್ರಾಧಿಕಾರ. ಈ ಕೂಡಲದೆ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲ್ಲೂಕು ಕಚೇರಿಗೆ ವರ್ಗಾವಣೆ ಮಾಡಿ ಆದೇಶ ನೀಡಿದ್ದಾರೆ.

ಇನ್ನೂ ಈ ಹಿಂದೆಯೂ ಇದೇ ರೀತಿಯಲ್ಲಿ ಕರ್ತವ್ಯಲೋಪವೆಸಗಿರುವ ಆರೋಪಗಳು ಇವರ ವಿರುದ್ಧ ಕೇಳಿ ಬಂದಿದ್ದು, ಇತ್ತೀಚೆಗೆ ಶಾಸಕ ಸಮೃದ್ಧಿ ಮಂಜುನಾಥ್ ಸಹ ತಾಲ್ಲೂಕು ಕಚೇರಿ ಸಿಬ್ಬಂದಿ ವಿರುದ್ಧ ಬೇಸರ ಹೊರ ಹಾಕಿದರು.

### ಮಗುವಿನ ಮೊದಲ ಪಾಠ ಶಾಲೆ ಮನೆ

**ಶಿಡ್ಲಘಟ್ಟ:** ಮನೆಯೇ ಮಗುವಿನ ಮೊದಲ ಪಾಠ ಶಾಲೆ ಮಗುವು ಶಾಲೆಗೆ ಸೇರುವುದಕ್ಕೂ ಮುನ್ನ ಮನೆಯಲ್ಲಿಯೇ ಕಲಿಕೆ ಆರಂಭವಾಗುತ್ತದೆ ಕೇಳಿ ತಿಳಿಯುವುದು, ಕಲಿಯುವುದಕ್ಕಿಂತಲೂ ನೋಡಿ ಕಲಿಯುವುದು ಹೆಚ್ಚು, ಹಾಗಾಗಿ ಪೋಷಕರನ್ನು ನೋಡಿ ಅನುಕರಣೆ ಮಾಡಿ ಕಲಿಯುವುದೇ ಹೆಚ್ಚು, ಆದ್ದರಿಂದ ಪೋಷಕರು ಮಕ್ಕಳ ಮುಂದೆ ತಮ್ಮ ನಡೆ ನುಡಿಯನ್ನು ಉತ್ತಮಪಡಿಸಿಕೊಳ್ಳಬೇಕು ಎಂದು ತಹಸೀಲ್ದಾರ್ ಬಿ.ಎನ್.ಸ್ವಾಮಿ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಹಂಡಿಗನಾಳದ ಬಾಲಾಜಿ ಕಲ್ಯಾಣ ಮಂಟಪದಲ್ಲಿ ನಡೆದ ಡಾಲ್ಫಿನ್ ವಿದ್ಯಾಸಂಸ್ಥೆಯ 'ಕಲಾ ಸಮ್ಮಿಲನ' ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಮಕ್ಕಳಿಗೆ ಸಾಮಾನ್ಯ ಜ್ಞಾನವನ್ನು ನೀಡುವ ಜತೆಗೆ ಸಂಸ್ಕಾರವನ್ನು ಕಲಿಸುವ ಕೆಲಸ ಮುಖ್ಯವಾಗಿ ಮನೆಯಲ್ಲೂ ಆಗಬೇಕು, ಶಾಲಾ–ಕಾಲೇಜುಗಳಲ್ಲೂ ಆಗಬೇಕಿದೆ ಜತೆಗೆ ನಾವು ಕೂಡ ನಮ್ಮ ಬದುಕಿನಲ್ಲಿ ಸಂಸ್ಕಾರವನ್ನು ಅಳವಡಿಸಿಕೊಳ್ಳಬೇಕು ಎಂದರು. ಪೋಷಕರು ತಮ್ಮ ಮಕ್ಕಳು ಶಾಲೆಗೆ ಸೇರಿಸಿ ಡೊನೇಷನ್ ಕಟ್ಟಿದ್ದೇವೆ ಎಂದು ಸುಮ್ಮನಾಗಬಾರದು, ಮಗುವಿನ ಮುಂದೆ ತಮ್ಮ ನಡೆ ನುಡಿಯನ್ನು ಉತ್ತಮಪಡಿಸಿಕೊಳ್ಳಬೇಕು ಮಗುವಿನ ಎಲ್ಲಾ ಹೇಳಿಕೊಳ್ಳುವಂತಹ ವಾತಾವರಣ ಮನೆಯಲ್ಲಿ ಇರಲಿ ಸಮಾಜದಲ್ಲಿ ನಡೆಯುವ ಒಳ್ಳೆಯದು– ಕೆಟ್ಟದ್ದನ್ನು ಅರಿತುಕೊಳ್ಳುವ ಜ್ಞಾನ ಮಕ್ಕಳಲ್ಲಿ ಬೆಳೆಸಬೇಕು, ಮೊಬೈಲ್ ವ್ಯಾಮೋಹದಿಂದ ದೂರ ಇರಿಸುವಂತಹ ಚಟುವಟಿಕೆಗಳ ಮೂಲಕ ಮೊಬೈಲ್ ನಿಂದ ಮಕ್ಕಳನ್ನು ದೂರವಿರಿಸಿ ಎಂದು ಹೇಳಿದರು.

ಇದೇ ವೇಳೆ ಶಾಲಾ ಮಕ್ಕಳಿಂದ ನಾನಾ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು, ನೃತ್ಯ, ಹಾಡುಗಾರಿಕೆ, ಏಕಪಾತ್ರಾಭಿನಯ ನಡೆಯಿತು,ಶಾಲಾ ವಾರ್ಷಿಕ ವರದಿ ಹಾಗೂ ಶಾಲಾ ಮಕ್ಕಳು ನಾನಾ ಕ್ರೀಡೆ, ಸಾಂಸ್ಕೃತಿಕ ಸ್ಪರ್ಧೆ, ಶೈಕ್ಷಣಿಕ ಚಟುವಟಿಕೆಗಳಲ್ಲಿನ ಸಾಧನೆಯ ವರದಿಯನ್ನು ಮಂಡಿಸಲಾಯಿತು. ಈ ಸಂದರ್ಭದಲ್ಲಿ ಸರ್ಕಾರಿ ಜೂ.ಕಾಲೇಜಿನ ಉಪನ್ಯಾಸಕ ಸಿ.ವೆಂಕಟಶಿವಾರೆಡ್ಡಿ,ಡಾಲ್ಫಿನ್ ವಿದ್ಯಾಸಂಸ್ಥೆ ಅಧ್ಯಕ್ಷ ಎ.ನಾಗರಾಜ್, ಕಾರ್ಯದರ್ಶಿ ವಿ.ಕೃಷ್ಣಪ್ಪ, ಖಜಾಂಚಿ ರತ್ನಮ್ಮ, ಎಂ.ಡಿ. ಅಶೋಕ್, ಆಡಳಿತಾಧಿಕಾರಿ ಚಂದನಾಅಶೋಕ್,ಶ್ರೀಧರ್, ವರಲಕ್ಷ್ಮಿ,ಪ್ರಂಶುಪಾಲ ಜೆ.ಎ. ಸುದರ್ಶನ್,ನೂರ್ ಜಹಾನ್ ಬೇಗಂ, ಎಲ್.ಮುನಿಕೃಷ್ಣಪ್ಪ, ಆರೀಫ್ ಅಹ್ಮದ್, ಎಂ.ಮುನಿಶಾಮಪ್ಪ ಉಪನ್ಯಾಸಕರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗು ಪೋಷಕರು ಪಾಲ್ಗೊಂಡಿದ್ದರು.

# ಅಪಘಾತ: 5 ಕುಟುಂಬಕ್ಕೆ 2 ಲಕ್ಷರೂ. ಪರಿಹಾರ

ಮುಳಬಾಗಲು : ಇತ್ತೀಚೆಗೆ ಗುಡಿಪಲ್ಲಿ ರಸ್ತೆ ಮಾರ್ಗದಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಮೃತ ಪಟ್ಟಿರುವ 5 ಮಂದಿ ಕುಟುಂಬದ ಸದಸ್ಯರಿಗೆ ತಲಾ 2 ಲಕ್ಷ ರೂಗಳ ಪರಿಹಾರ ಹಣವನ್ನು ಸರಕಾರದಿಂದ ಮಂಜೂರು ಮಾಡಿಸಿದ್ದು, ಮುಂದಿನ ವಾರ ಅವರ ಮನೆಗಳಿಗೆ ತೆರಳಿ ಚೆಕ್ ವಿತರಣೆ ಮಾಡಲಾಗುವುದು ಎಂದು ಶಾಸಕ ಸಮೃದ್ಧಿ ಮಂಜುನಾಥ್ ತಿಳಿಸಿದರು.

ಕಾಂತರಾಜ ಸರ್ಕಲ್ ಬಳಿ ಇರುವ ಶ್ರೀ ಸಾಯಿ ಕುಟೀರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, 15 ದಿನಗಳ ಹಿಂದೆ ನಗರಸಭೆ ಸದಸ್ಯ ಎಸ್.ವೈ.ರಾಜಶೇಖರ್ ಹೃದಯಾ ಘಾತದಿಂದ ಮೃತಪಟ್ಟಿದರು. ಇತ್ತೀಚಿಗೆ ಮುರುಡೇಶ್ವರ ಬೀಚ್‌ನಲ್ಲಿ ನಾಲ್ವರು ವಿದ್ಯಾರ್ಥಿಗಳು ಮೃತಪಟ್ಟಿದ್ದು ಜತೆಗೆ 5 ಮಂದಿ ಅಪಘಾತದಲ್ಲಿ ಮೃತಪಟ್ಟಿರುವು ದರಿಂದ ತುಂಬ ನೋವಾಗಿದೆ. ತಾಲೂಕಿನಲ್ಲಿ ಇಂತಹ ದುರ್ಘಟನೆಗಳು ನಡೆಯದಂತೆ ತಡೆಗಟ್ಟಲು ಹಾಗೂ ಶಾಂತಿ ಸುವ್ಯವಸ್ಥೆ ಕಾಪಾಡಲು ಮೃತ್ಯುಂಜಯ ಹೋಮವನ್ನು ಕೆಲವೇ ದಿನಗಳಲ್ಲಿ ಮಾಡಿಸಲು ಈಗಾಗಲೇ ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಕಳೆದ 7 ವರ್ಷಗಳಿಂದ ಮೇಲ್ ಮರವತ್ತೂರ್ ಓಂ ಶಕ್ತಿ ದೇವಾಲಯಕ್ಕೆ ತಾಲೂಕಿನಿಂದ ಮಾಲೆ ಧರಿಸಿರುವ ಭಕ್ತರಿಗೆ ಉಚಿತವಾಗಿ ಬಸ್ ವ್ಯವಸ್ಥೆ ಮಾಡುತ್ತಿದ್ದೇನೆ. ಈ



ವರ್ಷವೂ ಈ ಕಾರ್ಯಕ್ರಮ ಮುಂದು ವರಿಯಲಿದ್ದು, 1 ದಿನಕ್ಕೆ ಮಾತ್ರ ಸೀಮಿತವಾ ಗಿರುತ್ತದೆ. ಭಕ್ತರು ಯಾವುದೇ ಕಾರಣಕ್ಕೂ ಸಮುದ್ರ ಅಥವಾ ಬೀಚ್‌ಗಳಿಗೆ ಹೋಗುವು ದನ್ನು ನಿಷೇಧಿಸಲಾಗಿದೆ ಎಂದರು.

2025ರ ಜನವರಿ 1ರಿಂದ 8ನೇ ದಿನಾಂಕ ದ ವರೆಗೆ ಬಸ್ ವ್ಯವಸ್ಥೆ ಮಾಡಲಿದ್ದು ಯಾತ್ರೆಗೆ ತೆರಳುವವರು ಡಿ.27ರ ಒಳಗೆ ಜೆಡಿಎಸ್ ಪಕ್ಷದ ಮಹಾ ಪ್ರಧಾನ ಕಾರ್ಯದರ್ಶಿ ರಘುಪತಿರೆಡ್ಡಿ ಅವರಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದರು.

ಬೆಳಗಾವಿಯಲ್ಲಿ ನಡೆದ ಅಧಿ ವೇಶನದಲ್ಲಿ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಅನುದಾನಕ್ಕೆ ಧ್ವನಿ ಎತ್ತಿದ್ದು ಸರಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ. ನರಸಿಂಹತೀರ್ಥದ ಬಳಿ ಹೈಟೆಕ್ ಬಸ್ ನಿಲ್ದಾಣ, ಒಂದೇ ಸೂರಿನಡಿ ಎಲ್ಲಾ ಇಲಾಖೆಗಳು ಇರುವ ಕಂದಾಯ ಸೌಧನ್ನು 45 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಲು ಸಲ್ಲಿಸಿದ್ದ ಪ್ರಸ್ತಾವನೆಗೆ ಆರ್ಥಿಕ ಲಭ್ಯತೆ ಮೇರೆಗೆ ಅಗತ್ಯ ಕ್ರಮ ತೆಗೆದುಕೊಳ್ಳುವುದಾಗಿ ಸರಕಾರ ಹೇಳಿದೆ. ಅದೇ ರೀತಿ ಹೈಟೆಕ್ ಸರಕಾರಿ ಆಸ್ಪತ್ರೆ ನಿರ್ಮಾಣಕ್ಕೆ ಮತ್ತು ನಂಗಲಿ ಗ್ರಾಪಂ ಅನ್ನು ಪಟ್ಟಣ ಪಂಚಾಯಿತಿಗೆ ಮೇಲ್ದರ್ಜೆಗೆ ಏರಿಸಲು ಈಗಾಗಲೇ ಸರಕಾರ ಕ್ರಮ ತೆಗೆದುಕೊಂಡಿದೆ. ಸುಸಜ್ಜಿತವಾದ ಕ್ರೀಡಾಂಗಣ ನಿರ್ಮಾಣಕ್ಕೆ, ಹೈದರವಲ್ಲಿ ದರ್ಗಾದಲ್ಲಿ ನಡೆಯುವ ಉರುಸ್‌ಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಲು 15ರಿಂದ 22 ಕೋಟಿ ರೂ. ಗಳನ್ನು

ಶಾಸಕರ ಅನುದಾನದಡಿ 3 ಕೋಟಿ ರೂ ವೆಚ್ಚದಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿಗೆ ನಾನಾ ಕಾಮಗಾರಿಗಳನ್ನು ಹಮ್ಮಿಕೊಳ್ಳಿ ಜೈಲಾಗು ವುದು. ಅರಣ್ಯ ಇಲಾಖೆಯವರು ರೈತರ ಜಮೀನುಗಳನ್ನು ವಿನಾಕಾರಣ ತೆರವು ಮಾಡಬಾರದೆಂದು ಈಗಾಗಲೇ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗಿದೆ. ಆದರೂ ತೆರವು ಕಾರ್ಯಕ್ಕೆ ಅಧಿಕಾರಿಗಳು ಹೋರಾಟ ಎಚ್ಚರಿಕೆ ನೀಡಿದರು. ಮುಂದಾದರೆ ಉಗ್ರ ಮಾಡಲಾಗುವುದೆಂದು

ಸಚಿವ ಅಮಿತ್ ಅವರು ಅಂಬೇಡ್ಕರ್ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರು ವುದು ಸರಿಯಲ್ಲ. ಅಂಬೇಡ್ಕರ್ ಅವರ ಬಗ್ಗೆ ಯಾರೂ ಕೂಡ ಕೇವಲವಾಗಿ ಮಾತನಾಡಬಾರದು ಎಂದು ತಿಳಿಸಿದರು.

ಜೆಡಿಎಸ್ ಪ್ರಧಾನ ಕಾರ್ಯದರ್ಶಿ ರಘುಪತಿ ರೆಡ್ಡಿ, ಜಿಪಂ ಮಾಜಿ ಸದಸ್ಯರಾದ ಬಿ.ವಿ.ಶಾಮೇಗೌಡ, ಶ್ರೀನಿವಾಸ್, ಜಂಟಿ ಕಾರ್ಯದರ್ಶಿ ಕವನಾತನಹಳ್ಳಿ ಮುನಿಸ್ವಾಮಿಗೌಡ, ಪದ್ಮನಾಭಯ್ಯ ಮತ್ತಿತರರು ಹಾಜರಿದ್ದರು.

## ಮಧ್ಯವರ್ತಿಗಳ ಮುಖೇನ ಹೆಚ್ಚಿನ ಹಣ ವಸೂಲಿ



ಶಿಡ್ಲಘಟ್ಟ : ತಾಲ್ಲೂಕಿನಾದ್ಯಂತ ರಾಗಿ ಬೆಳೆ ಕಟಾವಿಗೆ ಬಂದಿದ್ದು, ಕೂಲಿಯಾಳುಗಳ ಸಮಸ್ಯೆಯಿಂದ ಬೆಳೆ ಕಟಾವಿಗೆ ಯಂತ್ರಗಳ ಮೊರೆ ಹೋಗಬೇಕಾದ ಪರಿಸ್ಥಿತಿ ಬಂದಿದ್ದು ಇದನ್ನು ಅರಿತ ಜಿಲ್ಲಾಧಿಕಾರಿಗಳು ಗಂಟೆಯೊಂದಕ್ಕೆ ಕಟಾವು ಯಂತ್ರಕ್ಕೆ 2700 ರೂ. ಗಳನ್ನು ನಿಗದಿಪಡಿಸಿ ಆದೇಶ ಮಾಡಿದ್ದರು ಆದೇಶ ಕಡೆಗಣಿಸಿ ಕಟಾವು ಯಂತ್ರಗಳ ಮಾಲೀಕರು ಕೆಲ ಮಧ್ಯವರ್ತಿಗಳ ಮೂಲಕ 3500 ರೂ.ಗಳಿಂದ 5000 ರೂ.ಗಳವರೆಗೂ ಹಣ ವಸೂಲಿ ಮಾಡುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ತಾಲ್ಲೂಕು ಅಧ್ಯಕ್ಷ ಎಸ್.ಎಂ.ರವಿಪ್ರಕಾಶ್ ಒತ್ತಾಯಿಸಿದರು.

ನಗರದ ತಾಲ್ಲೂಕು ಕಚೇರಿಗೆ ರೈತ ಸಂಘದ ಪದಾಧಿಕಾರಿಗಳೊಂದಿಗೆ ಭೇಟಿ ನೀಡಿ ಗ್ರೇಡ್–2 ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಕಟಾವು ಯಂತ್ರಗಳಿಗೆ ಹೆಚ್ಚು ಬಾಡಿಗೆ ಪಡೆಯುತ್ತಿರುವ ಯಂತ್ರಗಳ ಮಾಲೀಕರು ಹಾಗೂ ಮಧ್ಯವರ್ತಿಗಳ ವಿರುದ್ಧ ಕಠಿಣ ಕ್ರಮ ಜರುಗಿಸುವ ಜತೆಗೆ ರೈತರಿಗೆ ಆಗುತ್ತಿರುವ ಅನ್ಯಾಯ ಸರಿಪಡಿಸಬೇಕು ಎಂದರು.

ತಕ್ಷಣವೇ ಕೃಷಿ ಅಧಿಕಾರಿಗಳು ಹಾಗು ಹೋಬಳಿವಾರು ರಾಜಸ್ವ ನಿರೀಕ್ಷಕರಿಂದ ವರದಿ ತರಿಸಿಕೊಂಡು ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಟಿ.ಕೆ.ಅರುಣ್ ಕುಮಾರ್, ಜಿಲ್ಲಾ ಗೌರವಾಧ್ಯಕ್ಷ ಚನ್ನೇಗೌಡ, ಜಿಲ್ಲಾ ಕಾರ್ಯಾಧ್ಯಕ್ಷ ಸಿ.ಎಂ.ಮಾರುತಿ, ತಾಲೂಕು ಉಪಾಧ್ಯಕ್ಷ ಎನ್.ನಾಗರಾಜು,ಕಾರ್ಯದರ್ಶಿ ಸಿ.ಎನ್.ಶ್ರೀಧರ್, ವಿಸ್ಡಂ ನಾಗರಾಜ್, ಶ್ರೀರಾಮ್,ಕೆ.ಎಂ.ಮನೋಜ್ ಕುಮಾರ್, ಚಿಕ್ಕವೆಂಕಟರಮಣಪ್ಪ,ಕೃಷ್ಣಪ್ಪ,ನಾಗ 'ರಾಜ್, ದ್ಯಾವಪ್ಪ,ಬಿ.ಟಿ.ನಾಗರಾಜ್ ಇನ್ನಿತರರು ಪಾಲ್ಗೊಂಡಿದ್ದರು.

## ಉತ್ಪಾದಕರು ಗುಣಮಟ್ಟದ ಹಾಲು ಉತ್ಪಾದನೆಗೆ ಸಹಕರಿಸಿ

ಶಿಡ್ಲಘಟ್ಟ : ಕೋಲಾರ ಚಿಕ್ಕಬಳ್ಳಾಪುರ ಹಾಲು ಒಕ್ಕೂಟವನ್ನು ಬೇರ್ಪಡಿಸಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟವನ್ನು ರಚಿಸಲಾಗಿದೆ ಹಾಲು ಉತ್ಪಾದಕರು ಗುಣಮಟ್ಟದ ಹಾಲು ಉತ್ಪಾದನೆ ಮಾಡುವ ನಿಟ್ಟಿನಲ್ಲಿ ಸಹಕಾರ ನೀಡಬೇಕು.

ಜೊತೆಗೆ ಉತ್ತಮ ರಾಸುಗಳನ್ನು ಸಂರಕ್ಷಣೆ ಮಾಡಿಕೊಂಡು ಹಾಲಿನ ಉತ್ಪಾದನೆ ಹೆಚ್ಚಳ ಮಾಡುವ ನಿಟ್ಟಿನಲ್ಲಿ ಚಿಂತನೆ ನಡೆಸಬೇಕು ಎಂದು ಕೆಎಂಎಫ್ ನಿರ್ದೇಶಕ ಶ್ರೀನಿವಾಸ ರಾಮಯ್ಯ ತಿಳಿಸಿದರು.

ತಾಲ್ಲೂಕಿನ ದೇವರಮಳ್ಳೂರು ಗ್ರಾಮದ ಶ್ರೀ ಮಳ್ಳೂರಾಭ ದೇವಿಯ ದೇವಾಲಯ ಆವರಣದಲ್ಲಿ ನಡೆದ ಉತ್ತಮ ರಾಸುಗಳಿಗೆ ಬಹುಮಾನ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕೋಲಾರಕ್ಕೆ ಹೋಲಿಸಿದರೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಾಲಿನ ಉತ್ಪಾದನೆ ಕಡಿಮೆಯಾಗಿದೆ, ಸರ್ಕಾರ ಹಾಲು ಉತ್ಪಾದಕರಿಗೆ ಪ್ರೋತ್ಸಾಹಿಸುವ ಜೊತೆಗೆ ಹಾಲಿನ ದರವನ್ನು ಏರಿಸಲು ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸ ಗೌಡ ಮಾತನಾಡಿ ಜಿಲ್ಲೆಯಲ್ಲಿ ಹಾಲು ಉತ್ಪಾದನೆ ಹೆಚ್ಚಳ ಮಾಡುವ ಜೊತೆಗೆ ಬಿಎಂಸಿಗಳಲ್ಲಿ ನಡೆಯುತ್ತಿರುವ ಅಕ್ರಮಗಳಿಗೆ ಕಡಿವಾಣ ಹಾಕಲು ಕ್ರಮಾಕಾಗಿ ಭರವಸೆ ನೀಡಿದರು.

ಇದೇ ವೇಳೆ ಉತ್ತಮ ಮಿಶ್ರ ತಳಿಗಳಾದ ಎತ್ತು, ಹಸು, ಎಮ್ಮೆ, ಪಡ್ಡೆ ಗಳಿಗೆ ಪ್ರಥಮ ಬಹುಮಾನ ಕೊಡುವುದರ ಜೊತೆಗೆ ಎಲ್ಲ ಅರಸುಗಳಿಗೂ ಸಮಾಧಾನಕರ ಬಹುಮಾನಗಳನ್ನು ವಿತರಿಸಲಾಯಿತು,

ಈ ಸಂದರ್ಭದಲ್ಲಿ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಡಿ.ಸಿ. ರಾಮಚಂದ್ರ, ಕೋಚಿಮುಲ್ ಮಾಜಿ ನಿರ್ದೇಶಕ ಬಂಕ್ ಮುನಿಯಪ್ಪ, ಚಿಮುಲ್ ಶಿಬಿರ ಕಚೇರಿಯ ಉಪ ವ್ಯವಸ್ಥಾಪಕ ಡಾ. ರವಿಕಿರಣ, ವಿಸ್ತರಣಾಧಿಕಾರಿಗಳಾದ ಉಮೇಶ್ ರೆಡ್ಡಿ , ಜಯಚಂದ್ರ, ಶ್ರೀನಿವಾಸ್,ಗೋಪಾಲ್, ಮೋಹನ್,ವೇಣು, ಶಂಕರ್, ಹಾಪಕಾಮ್ಸ್ ಮಾಜಿ ಅಧ್ಯಕ್ಷ ಹುಜಗೂರು ರಾಮಯ್ಯ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ದೇವರಾಜ್, ಉಪಾಧ್ಯಕ್ಷ ಎಂ. ಕೇಶವರೆಡ್ಡಿ, ಡೇರಿಯ ಎಲ್ಲ ಸದಸ್ಯರು, ಮುಖ್ಯಕಾರ್ಯ ನಿರ್ವಾಹಕ ಪಿ, ಮಂಜುನಾಥ್, ಗ್ರಾಮ ಪಂಚಾಯತಿ ಸದಸ್ಯ ಎನ್, ವೆಂಕಟೇಶ್, ಕೆಂಪೇಗೌಡ, ಮುನಿಶಾಮಪ್ಪ ಮತ್ತಿತರರು ಹಾಜರಿದ್ದರು.




# ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದಲ್ಲಿ ಪ್ರತಿಭಟನೆ

ಚಾಮರಾಜನಗರ: ಅಂಬೇಡ್ಕರ್ ಕುರಿತು ಕೇಂದ್ರಗೃಹಸಚಿವ ಅಮಿತ್ ಷಾ ಅವಹೇಳನಕಾರಿ ಹೇಳಿಕೆ ವಿರೋಧಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ನಗರದ ಚಾಮರಾಜೇಶ್ವರದೇವಾಲಯದ ಉದ್ಯಾನದ ಆವರಣದಿಂದ ಜಿಲ್ಲಾಕಾಂಗ್ರೆಸ್ ಸಮಿತಿ ಅಧ್ಯಕ್ಷ ಪಿ.ಮರಿಸ್ವಾಮಿ ನೇತೃತ್ವದಲ್ಲಿ ಮೆರವಣಿಗೆ ಹೊರಟ ಕಾರ್ಯಕರ್ತರು, ಮುಖಂಡರು, ಪದಾಧಿಕಾರಿಗಳು ಕೇಂದ್ರಗೃಹಸಚಿವ ಅಮಿತ್‌ಷಾ ವಿರುದ್ಧ ಘೋಷಣೆಗಳನ್ನು ಕೂಗಿದರು.

ಭುವನೇಶ್ವರಿವೃತ್ತದಿಂದ ಬಿ.ರಾಚಯ್ಯ ಜೋಡಿರಸ್ತೆಯ ಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಿ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾಹುಡೇದ್ ಮೂಲಕ ಪ್ರಧಾನಿಮೋದಿ ಅವರಿಗೆ ಮನವಿ ಸಲ್ಲಿಸಿದರು.

ಜಿಲ್ಲಾಕಾಂಗ್ರೆಸ್ ಸಮಿತಿ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಕೇಂದ್ರಗೃಹಸಚಿವ ಅಮಿತ್ ಷಾ ಅಂಬೇಡ್ಕರ್ ಬಗ್ಗೆ ಅವಾಚ್ಯ ಶಬ್ದ ಬಳಸಿ ಮಾತನಾಡಿದ್ದಾರೆ. ಬಿಜೆಪಿಯವರಿಗೆ ಅಂಬೇಡ್ಕರ್ ಅವರಿಗೆ ಗೌರವವಿಲ್ಲ ಎಂಬುದು ಇದರಿಂದ ಗೊತ್ತಾಗುತ್ತದೆ. ಕೂಡಲೇ ಪ್ರಧಾನಿ ಮೋದಿ ಅಮಿತ್



ಷಾ ಅವರನ್ನು ಸಚಿವಸಂಪುಟದಿಂದ ವಜಾಮಾಡಬೇಕು, ರಾಜ್ಯದ ಮಹಿಳಾಮತ್ತು ಮಕ್ಕಳ ಕಲ್ಯಾಣಸಚಿವರ ವಿರುದ್ಧ ಅವಾಚ್ಯ ಶಬ್ದ ಬಳಸಿರುವ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರ ಸದಸ್ಯತ್ವವನ್ನು ವಜಾಮಾಡಬೇಕು ಎಂದು ಆಗ್ರಹಿಸಿದರು.

ಜಿಪಂ ಮಾಜಿಸದಸ್ಯ ಆರ್.ಬಾಲರಾಜು ಮಾತನಾಡಿ, ಕೇಂದ್ರಗೃಹಸಚಿವ ಅಮಿತ್ ಷಾ ಅಂಬೇಡ್ಕರ್ ಬಗ್ಗೆ ಅವಾಚ್ಯ ಶಬ್ದ ಬಳಸಿರುವುದು ಖಂಡನೀಯ, ಇವರ ಹೇಳಿಕೆ ಸಮಾಜವನ್ನು ಒಡೆಯುವ ತಂತ್ರವಾಗಿದೆ. ಅಮಿತ್‌ಷಾ ಅವರು ಸಚಿವಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾರಾಜಶೇಖರ್ ಜತ್ತಿ.ಚುಡಾಅಧ್ಯಕ್ಷ ಮಹಮದ್ ಅಸ್ಗರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ, ನಗರಸಭೆ ಸದಸ್ಯರಾದ ಚಿನ್ನಮ್ಮ, ಕಲಾವತಿ, ಜಿಪಂ ಮಾಜಿಸದಸ್ಯರಾದ ಕೆ.ನವೀನ್, ಕಾವೇರಿಶಿವಕುಮಾರ್, ರಮೇಶ್, ಕೆಪಿಸಿಸಿ ಸದಸ್ಯ ಸಯ್ಯದ್ ರಫೀ, ನಸ್ರುಲ್ಲಖಾನ್, ಕರಿನಂಜನಪುರಸ್ವಾಮಿ, ಮಹೇಶ್ ಕುದರ್, ಪೃಥ್ವಿ, ಎಸ್ಸಿಘಟಕದ ಅಧ್ಯಕ್ಷ ನಲ್ಲೂರುಸೋಮೇಶ್ವರ್, ಎಪಿಎಂಸಿ ಅಧ್ಯಕ್ಷ ಸೋಮೇಶ್, ಸದಸ್ಯ ಎ.ಎಸ್.ಪ್ರದೀಪ್, ಒಬಿಸಿ ರಾಜ್ಯಪ್ರಧಾನ ಕಾರ್ಯದರ್ಶಿ ಸಿ.ಎ.ಮಹದೇವಶೆಟ್ಟಿ, ಜಿ.ಎನ್.ಲೋಕೇಶ್, ಮೋಹನ್ ನಗು, ಶ್ರೀಕಾಂತ್, ಎಚ್.ಎಂ.ಮಹದೇವಶೆಟ್ಟಿ, ಮರಿಯಾಲದಹುಂಡಿಕುಮಾರ್, ಕಾಗಲವಾಡಿಶಿವಸ್ವಾಮಿ, ನಾಗವಳ್ಳಿನಾಗಯ್ಯ, ವೀರಭದ್ರಸ್ವಾಮಿ, ಮರಿಸ್ವಾಮಿ, ಕಮಲೇಶ್, ಕೆ.ನಾಗರಾಜು, ಮುತ್ತಿಗೆದೊರೆ, ಶೇಷಣ್ಣ, ದೇವರಾಜು,ಪುಟ್ಟಸ್ವಾಮಿ, ಚಿನ್ನಪ್ಪ, ರವಿ, ಬೆಳ್ಳೇಗೌಡ, ಕುದೇರುದೇವಣ್ಣ, ರಾಮೇಗೌಡ, ಮಾಧ್ಯಮ ಕಾರ್ಯದರ್ಶಿ ಗೌಡಳ್ಳಿರಾಜೇಶ್, ಪಕ್ಷದ ಕಾರ್ಯಕರ್ತರು, ಮುಖಂಡರು, ಪದಾಧಿಕಾರಿಗಳು ಭಾಗವಹಿಸಿದ್ದರು.

# ಬೆಳಗಾವಿಯ ಎಐಸಿಸಿ ಶತಮಾನೋತ್ಸವದಲ್ಲಿ ಭಾಗವಹಿಸಲು ಪೂರ್ವಭಾವಿ ಸಭೆ

ಚಿಕ್ಕಬಳ್ಳಾಪುರ: ಬಿಜೆಪಿ ದೇಶದೆಲ್ಲೆಡೆ ದ್ವೇಷದ ಮಾರುಕಟ್ಟೆ ತೆರೆದಿದ್ದು, ಪ್ರತಿ ನಿತ್ಯ, ಧರ್ಮದ ಹೆಸರಲ್ಲಿ ದ್ವೇಷದ ಬೀಜ ಬಿತ್ತುತ್ತಿದ್ದಾರೆ. ಅದೊಂದೇ ಅವರ ಅಜೆಂಡಾ. ಈಗ ಅವರು ಪ್ರಜಾಸತ್ತಾತ್ಮಕ ಮೌಲ್ಯವನ್ನೇ ಹೈಜಾಕ್ ಮಾಡಲು ಮುಂದಾಗಿದ್ದು ಹೀಗಾಗಿ ಈ ಬಾರಿಯ ಬೆಳಗಾವಿ ಕಾಂಗ್ರೆಸ್ ಅಧಿವೇಶನ ದೇಶದ ರಾಜಕೀಯ ಹಾಗೂ ಕಾಂಗ್ರೆಸ್ ಪಕ್ಷದ ಹೋರಾಟಕ್ಕೆ ಹೊಸ ತಿರುವು ನೀಡಲಿದೆ ಎಂದು ಸಚಿವ ಡಾ.ಎಂ.ಸಿ.ಸುಧಾಕರ್ ಅಭಿಪ್ರಾಯಪಟ್ಟರು.

ಜಿಲ್ಲಾ ಕಾಂಗ್ರೆಸ್ ಪಕ್ಷದ ವತಿಯಿಂದ ನಗರ ಹೊರವಲಯದ ಶ್ರೀಸಿಯರಾ ಹೋಟೆಲ್‌ನಲ್ಲಿ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿ, ಪ್ರಧಾನಿ ಮೋದಿ ಹಾಗೂ ಅಮಿತ್ ಶಾ ಸರ್ವಾಧಿಕಾರಿ ಆಡಳಿತದ ವಿರುದ್ಧ ಹೋರಾಟ ಮಾಡುತ್ತಿದ್ದು, ಈ ನಿಟ್ಟಿನಲ್ಲಿ ಬೆಳಗಾವಿಯಲ್ಲಿ ನಡೆಯಲಿರುವ ಅಧಿವೇಶನ ಬಹಳ ಪ್ರಮುಖವಾಗಿದೆ. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಈ ಸಭೆಯನ್ನು ಯಶಸ್ವಿಗೊಳಿಸಲಿದ್ದು, ಡಿಸೆಂಬರ್ 26ರಂದು ಮಧ್ಯಾಹ್ನ 3 ಗಂಟೆಗೆ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ. ಡಿಸೆಂಬರ್ 27 ರಂದು ಬೆಳಗ್ಗೆ 10–30 ಗಂಟೆಗೆ ಬೆಳಗಾವಿಯ ಎಐಸಿಸಿ ಶತಮಾನೋತ್ಸವ ಸಂಭ್ರಮದ ಐತಿಹಾಸಿಕ ಸಭೆ ನಡೆಯಲಿದೆ.

ಪರಿಶಿಷ್ಟ, ಅಲ್ಪಸಂಖ್ಯಾತ, ಹಿಂದುಳಿದ ವರ್ಗಗಳು ಸೇರಿ ಸಾಮಾನ್ಯ ವರ್ಗದ ಬಡವರಿಗೆ ರಕ್ಷಣೆ ಸಿಗಬೇಕು ಎಂಬ ಉದ್ದೇಶದಿಂದ ನಾವು ಜಾತಿಗಣತಿ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಸಾರ್ವಜನಿಕ ಉದ್ದಿಮೆಗಳ ಮಾರಾಟ ಮಾಡಲಾಗುತ್ತಿದೆ. ದೇಶದ ಎಲ್ಲಾ ಆಸ್ತಿಗಳು ಒಬ್ಬ ವ್ಯಕ್ತಿಯ ಕೈಗೆ ಸೇರುತ್ತಿದೆ. ಹೀಗಾಗಿ ಸಮಾನತೆ ಎಂಬುದೇ ದೇಶದಲ್ಲಿ ಇಲ್ಲವಾಗಿದೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಈ ಸಭೆಯಲ್ಲಿ ಕಾರ್ಯಕಾರಿ ಸಮಿತಿ ಸದಸ್ಯರು, ಶಾಶ್ವತ ಆಹ್ವಾನಿತರು, ವಿಶೇಷ ಆಹ್ವಾನಿತರು, ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಶಾಸಕಾಂಗ ಪಕ್ಷಗ ನಾಯಕರು, ಸಂಸದೀಯ ಸಮಿತಿ ಸದಸ್ಯರು, ಪಕ್ಷದ ಪ್ರಮುಖ ಘಟಕಗಳ ಅಧ್ಯಕ್ಷರು ಪಾಲ್ಗೊಳ್ಳಲಿದ್ದಾರೆ ಎಂದರು. ಎಐಸಿಸಿ ಶತಮಾನೋತ್ಸವ ಸಂಭ್ರಮದಲ್ಲಿ ಜಿಲ್ಲೆಯಿಂದ ಭಾಗವಹಿಸಲು ಪ್ರತಿ ವಿಧಾನ ಸಭಾ ಕ್ಷೇತ್ರದಿಂದ ಕನಿಷ್ಠ 100 ಜನ ಭಾಗಿಯಾಗಬೇಕು. ಅಲ್ಲಿ ವಸತಿ ಸೇರಿದಂತೆ ಆಗಮಿಸುವವರಿಗೆ ಮೂಲ ಭೂತ ಸಮಸ್ಯೆಯಾಗಬಾರದು. ಹಾಗೇನಾದರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರೆ ಅಂತಹವರು ಡಿಸೆಂಬರ್ 26 ರಂದು ಬೆಳಗಾವಿ ನಗರದಿಂದ 100 ಕಿಮೀ ಗಳ ಅಂತರದಲ್ಲಿ ವಾಸ್ತವ್ಯ ಹೂಡಿ ನಂತರ ಡಿಸೆಂಬರ್ 27 ರಂದು ಬೆಳಗ್ಗೆ 9–30 ಗಂಟೆಗೆಲ್ಲಾ ಅಧಿವೇಶನದ ಸ್ಥಳದಲ್ಲಿ ಸೇರಿಕೊಳ್ಳುವಂತೆ ತಿಳಿಸಿ ಜಿಲ್ಲೆಯ



ಎಲ್ಲಾ ತಾಲೂಕಿನ ಕಾಂಗ್ರೆಸ್ ಮುಖಂಡರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಎಐಸಿಸಿ ಅಧಿವೇಶನಕ್ಕೆ ತೆರಳಬೇಕೆಂದು ಮನವಿಮಾಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ದೆಹಲಿಯಲ್ಲಿ ಸಂಸತ್ತಿನಲ್ಲಿ ನಡೆದಂತಹ ಡಾ. ಬಿಆರ್ ಅಂಬೇಡ್ಕರ್ ಅವರ ಬಗ್ಗೆ ಹೀಯಾಳಿಸಿದ ಗೃಹ ಸಚಿವರ ಅಮಿತ್ ಶಾ ಅವರ ನಡೆಯನ್ನು ಖಂಡಿಸಿದರು. ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ನಡೆದ ಸಿಟಿ ರವಿ ಪ್ರಕರಣದ ಬಗ್ಗೆ ಮಾತನಾಡಿ ಸಿ.ಟಿ. ರವಿ ರವರು ನಾನು ಒಟ್ಟಿಗೆ ವಿಧಾನ ಸಭೆ ಪ್ರವೇಶಿಸಿದೆವು. ಅವರು ಎತ್ತರಕ್ಕೆ ಬೆಳೆದರು, ಇಂತಹ ಕೀಳು ಮಟ್ಟಕ್ಕೆ ಮಾತನಾಡಬಾರದಿತ್ತು ಅವರು ತಪ್ಪು ಮಾಡಿದ್ದಾರೆ ಅವರಿಗೆ ಶಿಕ್ಷೆ ಆಗಲೇಬೇಕು. ನಂದಿ ಬೆಟ್ಟಕ್ಕೆ ಅತಿ ಶೀಘ್ರದಲ್ಲಿಯೇ ರೂಪ್ ವೇ ಪರಿಸರಕ್ಕೆ ಹಾನಿ ಆಗದಂತೆ ನಿರ್ಮಾಣ ಮಾಡಲಾಗುವುದು ಎಂದರು.

ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಇನ್ನೂ ಸಮಿತಿಗಳ ರಚನೆ ಆಗದಿರುವ ಬಗ್ಗೆ ಸುದ್ದಿಗಾರರು ಪ್ರಶ್ನಿಸಿದ ಪ್ರಶ್ನೆಗೆ ಉತ್ತರಿಸಿ ಈಗಾಗಲೇ ಚಿಂತಾಮಣಿ ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ಆಗಿದೆ ಶೀಘ್ರದಲ್ಲಿಯೇ ಚಿಕ್ಕಬಳ್ಳಾಪುರದಲ್ಲೂ ಸಮಿತಿಗಳ ರಚನೆ ಆಗಲಿದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ.ಎನ್.ಕೇಶವ ರೆಡ್ಡಿ, ಮಾಜಿ ಶಾಸಕರಾದ ಬಚ್ಚೇಗೌಡ, ಅನಸೂಯಮ್ಮ, ಜಿಪಂ ಮಾಜಿ ಅಧ್ಯಕ್ಷ ಗಂಗರೆ ಕಾಲುವೆ ನಾರಾಯಣಸ್ವಾಮಿ. ಜಿಲ್ಲಾ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ನಂದಿ ಅಂಜನಪ್ಪ, ನಯನಾಹಳ್ಳಿ ನಾರಾಯಣಸ್ವಾಮಿ,ಮಹಿಳಾ ಜಿಲ್ಲಾಧ್ಯಕ್ಷೆ ಯಾಸ್ಮಿನ್ ತಾಜ್, ಮರಸನಹಳ್ಳಿ ಪ್ರಕಾಶ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಕೆ.ಸಿ.ರಾಜಾಕಾಂತ್, ಮುನೇಗೌಡ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುರೇಶ್, ಬ್ಲಾಕ್ ಅಧ್ಯಕ್ಷ ಎಂ.ಜಯರಾಮ್,ನಾರಾಯಣಮ್ಮ ಸುಮಿತ್ರಮ್ಮ, ಕೆಪಿಸಿಸಿ ಕಾರ್ಮಿಕ ರಾಜ್ಯ ಕಾರ್ಯದರ್ಶಿ ಕೋನಪಲ್ಲಿ ಕೋದಂಡ,ಮಂಗಳ ಪ್ರಕಾಶ್,ಮಮತಾ ಮೂರ್ತಿ,ಉಷಾ ಶ್ರೀನಿವಾಸ್, ಅಣ್ಣಮ್ಮ ಮತ್ತು ಇತರರು ಇದ್ದರು.

# ತಿರುಮಲದ ಶ್ರೀವಾಣಿ ದರ್ಶನ ಟಿಕೆಟ್‌ಗೆ ಮುಗಿ ಬಿದ್ದ ಜನ

ತಿರುಪತಿ, ಆಂಧ್ರಪ್ರದೇಶ: ಶ್ರೀವಾಣಿ ಟ್ರಸ್ಟ್ ದರ್ಶನ್ ಟಿಕೆಟ್‌ಗಳಿಗೆ ದಿನದಿಂದ ದಿನಕ್ಕೆ ಬೇಡಿಕೆ ಹೆಚ್ಚುತ್ತಿದೆ. ತಿರುಮಲ ಗೋಕುಲಂ ಕಚೇರಿಯಲ್ಲಿ ಟಿಟಿಡಿ ಪ್ರತಿದಿನ 800 ಕೋಟಾ ಟಿಕೆಟ್‌ಗಳನ್ನು ನೀಡುತ್ತಿದ್ದು, ಇವುಗಳನ್ನು ಖರೀದಿಸಲು ಭಕ್ತರು ಸರತಿ ಸಾಲಿನಲ್ಲಿ ನಿಲ್ಲುತ್ತಿದ್ದಾರೆ. ಕಳೆದ 10 ದಿನಗಳಿಂದ ಶ್ರೀವಾಣಿ ಟ್ರಸ್ಟ್ ಟಿಕೆಟ್ ವಿತರಣೆ ಪ್ರಕ್ರಿಯೆ ಮಧ್ಯಾಹ್ನ 1 ಗಂಟೆಗೆಲ್ಲ ಮುಗಿಯುತ್ತಿದೆ. ತಿರುಮಲ ತಿರುಪತಿ ದೇವಸ್ಥಾನ 10,500 ರೂ.ಗೆ ಶ್ರೀವಾಣಿ ಟ್ರಸ್ಟ್ ದರ್ಶನ ಟಿಕೆಟ್‌ಗಳನ್ನು ನೀಡುತ್ತಿದೆ. ಸಾಮಾನ್ಯವಾಗಿ ಟಿಕೆಟ್ ವಿತರಣೆ ಬೆಳಗ್ಗೆ 8:30 ಕ್ಕೆ ಪ್ರಾರಂಭವಾಗುತ್ತದೆ.

ಇವುಗಳಿಗಾಗಿ ಬೆಳಗ್ಗೆ 6 ಗಂಟೆಯಿಂದಲೇ ಭಕ್ತರು ಸರತಿ ಸಾಲಿನಲ್ಲಿ ಕಾಯುತ್ತಿದ್ದಾರೆ. ಶ್ರೀವಾಣಿ ಟಿಕೆಟ್ ಬಯಸುವ ಭಕ್ತರ ಕುಟುಂಬದ ಪ್ರತಿಯೊಬ್ಬರೂ ಕೌಂಟರ್‌ಗೆ ತೆರಳಿ ಟಿಕೆಟ್ ಖರೀದಿಸಬೇಕು. ಚಿಕ್ಕ ಮಕ್ಕಳನ್ನು ಕೂಡ ಸರತಿ ಸಾಲಿನಲ್ಲಿ ನಿಲ್ಲಿಸಲು ಮಹಿಳೆಯರು ತೊಂದರೆ ಅನುಭವಿಸುತ್ತಿದ್ದಾರೆ. ಶ್ರೀವಾಣಿ ಟ್ರಸ್ಟ್‌ನ ದರ್ಶನ ಟಿಕೆಟ್‌ಗೆ ಭಾರಿ ಬೇಡಿಕೆ ಹೆಚ್ಚಿದ್ದು, ಒಂದು ಗಂಟೆ ಕಳೆದರೂ ಟಿಕೆಟ್ ಇಲ್ಲದೇ ಇರುವುದರಿಂದ ಟಿಕೆಟ್ ಸಿಗದ ಭಕ್ತರು





ನಿರಾಸೆಯಿಂದ ಹಿಂತಿರುಗುತ್ತಿದ್ದಾರೆ.

ತಿರುಮಲ ವಿಷನ್–2047: ಇದೇ ವೇಳೆ, ಟಿಟಿಡಿ ಶುದ್ಧೀಕರಣದ ಭಾಗವಾಗಿರುವ ಕೆಲಸ ಆರು ತಿಂಗಳಲ್ಲಿ ಶೇ 10ರಷ್ಟು ಮಾತ್ರ ಮಾಡಲಾಗಿದೆ ಎಂದು ಇವೊ ಶ್ಯಾಮಲಾ ರಾವ್ ಹೇಳಿದ್ದಾರೆ. ಸ್ಥಳೀಯ ಅನ್ನಮಯ್ಯ ಭವನದಲ್ಲಿ ಸ್ವರ್ಣಾಂಧ್ರ ವಿಷನ್–2047 ಹಾಗೂ ತಿರುಮಲ ವಿಷನ್–2047ರ ಪ್ರಕಾರ ದೇವಸ್ಥಾನದಿಂದ ಕೈಗೊಳ್ಳಬೇಕಾದ ಕಾರ್ಯಚಟುವಟಿಕೆಗಳ ಕುರಿತು ಇವೊ ಶ್ಯಾಮಲಾ ರಾವ್ ಹಾಗೂ ಹೆಚ್ಚುವರಿ ಇವೊ ವೆಂಕಯ್ಯ ಚೌಧರಿ ಅವರೊಂದಿಗೆ ಸುದ್ದಿಗೋಷ್ಠಿ ನಡೆಸಿದರು. ಸಿಎಂ ಚಂದ್ರಬಾಬು ನಾಯ್ಡು ಆದೇಶದಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಇಒ ಆಗಿ ಅಧಿಕಾರ ವಹಿಸಿಕೊಂಡ ಬಳಿಕ ಪವಿತ್ರ ಲಡ್ಡು ಪ್ರಸಾದದಲ್ಲಿ ತುಪ್ಪದ ಗುಣಮಟ್ಟ ಹೆಚ್ಚಿಸುವ ಕೆಲಸ ಮಾಡಿದ್ದೇನೆ ಎಂದು ಅವರು ಇದೇ ವೇಳೆ ಸ್ಪಷ್ಟಪಡಿಸಿದರು. ಭಗವಂತನಿಗೆ ಅರ್ಪಿಸುವ ಪ್ರಸಾದ ಮತ್ತು ಲಡ್ಡು ಪ್ರಸಾದಕ್ಕೆ ಬಳಸುವ ತುಪ್ಪ, ಶುದ್ಧ ಹಸುವಿನ ತುಪ್ಪ ಎಂದು ಅವರು ತಿಳಿಸಿದರು.

ಪವಿತ್ರತೆಯೇ ನಮ್ಮ ಗುರಿ: ವೆಂಕಮಾಂಬ ಎಂಬ ವಿತರಣಾ ಕೇಂದ್ರದಲ್ಲಿ ಭಕ್ತರಿಗೆ ನೀಡುವ ಅನ್ನಸಂತರ್ಪಣೆಯ ಗುಣಮಟ್ಟವನ್ನೂ ಹೆಚ್ಚಿಸಿದ್ದೇವೆ ಎಂದು ಇವೊ ಶ್ಯಾಮಲಾ ರಾವ್ ಹೇಳಿದರು. ಅಲ್ಲದೆ, ಭಕ್ತರು ತಿಮ್ಮಪ್ಪನ ದರ್ಶನಕ್ಕಾಗಿ ಸರತಿ ಸಾಲಿನಲ್ಲಿ ಕಾಯುವ ಸಮಯವನ್ನು ಕಡಿಮೆ ಮಾಡಿ ಸ್ವಚ್ಛತೆಗೆ ವಿಶೇಷ ಗಮನ ಹರಿಸಲಾಗಿದೆ. ವೆಂಕಟೇಶ್ವರನ ಸಾಲಕಟ್ಲ ಬ್ರಹ್ಮೋತ್ಸವ ಹಾಗೂ ಶ್ರೀ ಪದ್ಮಾವತಿ ಅಮ್ಮನವರ ಬ್ರಹ್ಮೋತ್ಸವವನ್ನು ಅದ್ದೂರಿಯಾಗಿ ಆಯೋಜಿಸಲಾಗಿದೆ. ತಿರುಮಲನ ದರ್ಶನಕ್ಕೆ ಬರುವ ಪ್ರತಿಯೊಬ್ಬ ಭಕ್ತರಿಗೂ ಉತ್ತಮ ಅನುಭವ ನೀಡಲು ಟಿಟಿಡಿ ಬದ್ಧ ಎಂದು ಅವರು ವಾಗ್ದಾನ ಮಾಡಿದರು. ತಿರುಮಲದ ಆಧ್ಯಾತ್ಮಿಕತೆ ಮತ್ತು ಪಾವಿತ್ರ್ಯತೆಯನ್ನು ರಕ್ಷಿಸುವುದು ತಮ್ಮ ಮುಖ್ಯ ಗುರಿಯಾಗಿದೆ ಎಂದು ಅವರು ಇದೇವೇಳೆ ಬಹಿರಂಗಪಡಿಸಿದರು.

# ಸಿ.ಟಿ. ರವಿಗೆ ಸ್ವಾಗತ ಕೋರಿದ 7 ಆಂಬುಲೆನ್ಸ್ ವಿರುದ್ಧ ಪ್ರಕರಣ



ಚಿಕ್ಕಮಗಳೂರು, ಡಿ.23– ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಅವರಿಗೆ ಸ್ವಾಗತ ಕೋರಲು ಆಗಮಿಸಿದ್ದ 7 ಆಂಬುಲೆನ್ಸ್ ಗಳ ಮೇಲೆ ನಗರ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಬಿಎನ್‌ಎಸ್ 177, 285 ಹಾಗೂ 292ರ ಅಡಿ ಪ್ರಕರಣ ದಾಖಲು ಮಾಡಲಾಗಿದೆ.

ಮಾಗಡಿ ಕೈಮರದಿಂದ ಸೈರನ್ ಹಾಕಿಕೊಂಡು ಬಂದಿದ್ದ ಆಂಬುಲೆನ್ಸ್ ಗಳು ರೋಗಿಗಳು ಇಲ್ಲದೆ ಸೈರನ್, ಟಾಪ್ ಲೈಟ್ ಹಾಕಿದ್ದಕ್ಕೆ ಪ್ರಕರಣ ದಾಖಲಾಗಿದೆ. ಸೈರನ್ ಹಾಕಿಕೊಂಡು ಸಾರ್ವಜನಿಕರಿಗೆ ಕಿರಿಕಿರಿ ಎಂದು ಪ್ರಕರಣ ದಾಖಲು ಮಾಡಲಾಗಿದ್ದು, ನಗರ ಠಾಣೆಯಲ್ಲಿ 7 ಆಂಬುಲೆನ್ಸ್ ಗಳ ಮೇಲೆ ಎಫ್‌ಐಆರ್ ಆಗಿದೆ.ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರನ್ನು ಪೊಲೀಸರು ವಶಕ್ಕೆ ಪಡೆಯುತ್ತಿದ್ದಂತೆ ನಗರದ ಬಂದ್ ಸೇರಿದಂತೆ ಹಲವು ಕಾರಣಕ್ಕಾಗಿ ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್. ದೇವರಾಜಶೆಟ್ಟಿ, ಯುವಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ್‌ಕೋಟ್ಯನ್ ಸೇರಿದಂತೆ 200ಕ್ಕೂ ಹೆಚ್ಚು ಜನರ ವಿರುದ್ಧ ನಗರಠಾಣೆ ಮತ್ತು ಬಸವನಹಳ್ಳಿ ಠಾಣೆಯಲ್ಲಿ 7 ಪ್ರಕರಣಗಳು ದಾಖಲಾಗಿದೆ.

# ಹೊಸ ವರ್ಷಾಚರಣೆಗೆ ದಿನಗಣನೆ ಕಟ್ಟೆಚ್ಚರ ವಹಿಸಲು ಪೊಲೀಸ್ ಆಯುಕ್ತ ದಯಾನಂದ್ ಸೂಚನೆ

ಬೆಂಗಳೂರು: ಹೊಸ ವರ್ಷಾಚರಣೆಗೆ ದಿನಗಣನೆ ಆರಂಭವಾಗಿದ್ದು, ನಗರದಲ್ಲಿ ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಬೆಂಗಳೂರು ಪೊಲೀಸ್ ಆಯುಕ್ತ ಬಿ ದಯಾನಂದ್ ಅವರು ಖಡಕ್ ಸೂಚನೆ ನೀಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಭಯೋತ್ಪಾದಕ ಚಟುವಟಿಕೆಗಳು ಹೆಚ್ಚಿದ ಹಿನ್ನೆಲೆಯಲ್ಲಿ ಹೊಸ ವರ್ಷದ ಸಂದರ್ಭದಲ್ಲಿ ಶಾಂತಿಭಂಗವನ್ನುಂಟು ಮಾಡುವ ಸಾಧ್ಯತೆ ಇರುತ್ತದೆ. ಹೀಗಾಗಿ, ಅಂತವರ ಮೇಲೆ ನಿಗಾವಹಿಸಿ, ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಬೇಕು. ಹೊಸ ವರ್ಷಾಚರಣೆ ವಿರೋಧಿಸುವ ಸಂಘ ಸಂಸ್ಥೆಗಳ ಬಗ್ಗೆ ಗುಪ್ತವಾಗಿ ಮಾಹಿತಿ ಸಂಗ್ರಹಿಸಿ, ಮುನ್ನೆಚ್ಚರಿಕೆ ವಹಿಸಿ. ಮಾಲ್ ಗಳಲ್ಲಿ ಸಿಸಿ ಕ್ಯಾಮೆರಾಗಳು ಸುಸ್ಥಿತಿಯಲ್ಲಿ ಇಡುವಂತೆ ಅಲ್ಲಿನ ಸಿಬ್ಬಂದಿಗಳಿಗೆ ಸೂಚನೆ ನೀಡುವಂತೆ ತಿಳಿಸಿದ್ದಾರೆ.

ಹಾಗೆಯೇ ಎಲ್ಲ ಪೊಲೀಸ್ ಅಧಿಕಾರಿಗಳು ಸರ್ವೀಸ್ ರಿವಾಲ್ವಾರ್ ಹೊಂದಿರಬೇಕು. ಪೊಲೀಸ್ ಸಿಬ್ಬಂದಿ ಹೆಲ್ಮೆಟ್, ಲಾಠಿಗಳನ್ನು ಹೊಂದಿರಬೇಕು. ಹೆಣ್ಣು ಮಕ್ಕಳನ್ನು ಚುಡಾಯಿಸುವವರ ಮೇಲೆ ಕೂಡಲೇ ಕ್ರಮ ಕೈಗೊಳ್ಳಬೇಕು. ರಸ್ತೆ ಮೇಲೆ ಬಾಟಲಿ ಹೊಡೆದು ದಾಂಧಲೆ ಮಾಡುವವರನ್ನು ಕೂಡಲೇ ವಶಕ್ಕೆ ಪಡೆದು ಕ್ರಮಕೈಗೊಳ್ಳಬೇಕು ಎಂದು ಬಿ.ದಯಾನಂದ್ ಸೂಚನೆ ನೀಡಿದ್ದಾರೆ.

ಹೆಣ್ಣುಮಕ್ಕಳನ್ನ ಚುಡಾಯುಸುವವರ ಮೇಲೆ ಕೂಡಲೇ ಕ್ರಮ ಕೈಗೊಳ್ಳಬೇಕು. ಮದ್ಯ ಮಾರಾಟ ಜಾಗದಲ್ಲಿ ಗಲಾಟೆ, ದೊಂಬಿ, ಬಾಟಲಿ ಎಸೆಯುವವರ ಮೇಲೆ ಕ್ರಮ ಕೈಗೊಳ್ಳಿ. ಜನ ಸೇರುವ ರಸ್ತೆ ಮತ್ತು ಪ್ರದೇಶಗಳಲ್ಲಿ ಸಿಸಿಟಿವಿ ಅಳವಡಿಸಿ. ರಸ್ತೆಗಳಲ್ಲಿ ವಿದ್ಯುತ್ ದೀಪಗಳು ಕೆಲಸ ಮಾಡುವಂತೆ ನೋಡಿಕೊಳ್ಳಬೇಕು. ರೌಡಿಗಳ ಚಟುವಟಿಕೆಗಳ ಮೇಲೆ ನಿಗಾ ಇಡಿ. ಪ್ರಮುಖ ರಸ್ತೆಗಳಲ್ಲಿ ವಾಹನ ನಿಲುಗಡೆ, ಪ್ರಮುಖ ಪ್ಲೈಓವರ್‌ಗಳ ಮೇಲೆ ವಾಹನ ಸಂಚಾರ ನಿಷೇಧಿಸಿ. ಮತ್ತು ಠಾಣೆಯ ಹೊಯ್ಸಳ ಮತ್ತು ಚೀತಾಗಳು ಸದಾ ಗಸ್ತು ನಿರ್ವಹಿಸಬೇಕು ಎಂದು ಪೊಲೀಸ್ ಸಿಬ್ಬಂದಿಗೆ ಸೂಚನೆ ನೀಡಿದ್ದಾರೆ.

# ರೈತನನ್ನು ಎಳೆದೊಯ್ದು ಕೊಂದು ತಿಂದ ಹುಲಿ

ಬಾಲಾಘಾಟ್: ಮಧ್ಯಪ್ರದೇಶದ ಬಾಲಘಾಟ್ ಜಿಲ್ಲೆಯ ಖೈರ್ಲಾಂಜಿ ಸಿಲಾರಿ ಗ್ರಾಮದಲ್ಲಿ ಭಾನುವಾರ ರೈತನೊಬ್ಬನನ್ನು ಹುಲಿಯೊಂದು ಕೊಂದು ತಿಂದಿರುವ ಹೃದಯ ವಿದ್ರಾವಕ ಘಟನೆ ಬೆಳಕಿಗೆ ಬಂದಿದೆ. ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಬುಡಕಟ್ಟು ಜನಾಂಗದ ರೈತನನ್ನು ಹುಲಿ ಬೇಟೆಯಾಡಿ, ಆತನ ದೇಹದ ಅರ್ಧದಷ್ಟು ಭಾಗವನ್ನು ತಿಂದಿದೆ. ಶವ ಕಂಡು ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ.

ಹೊಲಕ್ಕೆ ಹೋದವ ಮರಳಿ ಬರಲಿಲ್ಲ: ರೈತ ಸುಖರಾಮ್ ಉಯ್ಕೆ (55) ಎಂಬವರೇ ಹುಲಿಗೆ ಬಲಿಯಾದ ರೈತ. ದನಗಳನ್ನು ಮೇಯಿಸಲು ಜೊತೆಗೆ ಕರೆದೊಯ್ದಿದ್ದ ರೈತ, ಉಳುಮೆ ಮಾಡುವ ಕಾರ್ಯದಲ್ಲಿ ತೊಡಗಿದ್ದರು. ಆದರೆ ದನಗಳು ಮಾತ್ರ ಮನೆಗೆ ಮರಳಿದ್ದವು. ಇದರಿಂದ ಅನುಮಾನಗೊಂಡ ಕುಟುಂಬಸ್ಥರು ಗ್ರಾಮಸ್ಥರೊಂದಿಗೆ ಸೇರಿ ಸುಖರಾಮ್‌ಗಾಗಿ ಹುಡುಕಾಟ ನಡೆಸಿದ್ದಾರೆ.

ಸುಖರಾಮ್ ಮೃತ ದೇಹ ತಿನ್ನುತ್ತಿದ್ದ ಹುಲಿ: ಗ್ರಾಮಸ್ಥರು ಹಾಗೂ ಪಕ್ಕದ ಊರಿನವರೆಲ್ಲ ಸೇರಿಕೊಂಡು ಮಧ್ಯಾಹ್ನದ ವೇಳೆಗೆ ಹೊಲಗಳಿಗೆ ಹೋಗಿ ಹುಡುಕಾಡಿದ್ದಾರೆ. ಅಲ್ಲಿ ಸುಖರಾಮ್ ಅವರ ಚಪ್ಪಲಿ ಮತ್ತು ಟವೆಲ್ ಬಿದ್ದಿರುವುದು ಕಂಡು ಬಂದಿದೆ. ಸಮೀಪದ ಪೊದೆಗಳಲ್ಲಿ ಎಳೆದೊಯ್ದಿರುವ ಗುರುತುಗಳು ಕಾಣಿಸಿದ್ದು, ಹುಲಿಯೊಂದು ಸಮೀಪದ ಕಬ್ಬಿನ ಗದ್ದೆಯಲ್ಲಿ ಸುಖರಾಮ್ ಮೃತದೇಹವನ್ನು ಭಕ್ಷಿಸುತ್ತಿರುವುದನ್ನು ಕಂಡಿದ್ದಾರೆ. ಗ್ರಾಮಸ್ಥರನ್ನು ಕಂಡೊಡನೆ ಎಚ್ಚೆತ್ತುಕೊಂಡ ಹುಲಿ ಸ್ಥಳದಿಂದ ಓಡಿ ಹೋಗಿದೆ. ಈ ದೃಶ್ಯವನ್ನು ಕಂಡ ಗ್ರಾಮಸ್ಥರು ಭಯಭೀತರಾಗಿದ್ದಾರೆ. ಸುಖರಾಮ್ ಅವರ ತಲೆ ಮತ್ತು ಕುತ್ತಿಗೆಯ ಮೇಲೆ ತೀವ್ರ ಗಾಯಗಳಾಗಿತ್ತು. ಅಲ್ಲದೇ, ಅವರ ಸೊಂಟದ ಕೆಳಗಿನ ಭಾಗವನ್ನು ಹುಲಿಯು ತಿಂದು ಮುಗಿಸಿತ್ತು. ಮೃತದೇಹ ಕಂಡು ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

ಕೆಲ ದಿನಗಳಿಂದಲೂ ಕಾಣಿಸಿಕೊಂಡಿದ್ದ ಹುಲಿ: ಕೆಲ ದಿನಗಳ ಹಿಂದೆಯೇ ಹುಲಿ ಓಡಾಡುತ್ತಿರುವುದು ಗ್ರಾಮಸ್ಥರ ಗಮನಕ್ಕೆ ಬಂದಿತ್ತು. ಈ ಬಗ್ಗೆ ಜನರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದರು. ಆ ಬಳಿಕ ಅರಣ್ಯಾಧಿಕಾರಿಗಳು ತಮ್ಮ ತಂಡದೊಂದಿಗೆ ಸ್ಥಳಕ್ಕೆ ಆಗಮಿಸಿ ಹುಲಿಗಾಗಿ ಹುಡುಕಾಟ ನಡೆಸಿದ್ದರು. ಅರಣ್ಯಾಧಿಕಾರಿಗಳ ಪ್ರಕಾರ, "ಎರಡು ದಿನಗಳ ಹಿಂದೆ ಹಸುವಿನ ಕರುವಿನ ಮೇಲೆ ಹುಲಿ ದಾಳಿ ನಡೆಸಿತ್ತು. ಶನಿವಾರದಿಂದ ಅರಣ್ಯ ತಂಡ ಡ್ರೋನ್ ಕ್ಯಾಮೆರಾಗಳ ಮೂಲಕ ಶೋಧ ನಡೆಸುತ್ತಿದ್ದರೂ ಹುಲಿಯ ಯಾವುದೇ ಕುರುಹು ಪತ್ತೆಯಾಗಿರಲಿಲ್ಲ. ಸಂಜೆಯ ನಂತರ ಮನೆಯಿಂದ ಹೊರಬಾರದಂತೆ ಮತ್ತು ರಾತ್ರಿಯಲ್ಲಿ ತೀರಾ ಅಗತ್ಯವಿದ್ದಾಗ ಮಾತ್ರ ಹೊರಗೆ ಹೋಗುವಂತೆ ಗ್ರಾಮಸ್ಥರಿಗೆ ನಿರಂತರವಾಗಿ ಎಚ್ಚರಿಕೆ ನೀಡಲಾಗಿದೆ. ಹಗಲಿನಲ್ಲಿ ಒಬ್ಬಂಟಿಯಾಗಿ ಹೊಲಗಳಿಗೆ ಹೋಗಬೇಡಿ ಮತ್ತು ಸಾಧ್ಯವಾದರೆ ಸಂಜೆ ಮನೆಗಳ ಸುತ್ತಮುತ್ತ ಪಟಾಕಿಗಳನ್ನು ಸಿಡಿಸುವಂತೆ" ತಿಳಿಸಲಾಗಿದೆ. ಹುಲಿ ದಾಳಿ ಹಿನ್ನೆಲೆಯಲ್ಲಿ ಒಂದೆಡೆ ಅರಣ್ಯ ಪ್ರದೇಶದಿಂದ ದೂರ ಉಳಿಯುವಂತೆ ಅರಣ್ಯ ಇಲಾಖೆ ನಿರಂತರವಾಗಿ ಗ್ರಾಮಸ್ಥರಿಗೆ ಸಲಹೆ ನೀಡುತ್ತಿದ್ದರೆ, ಮತ್ತೊಂದೆಡೆ ಈ ಘಟನೆ ಬಗ್ಗೆ ಗ್ರಾಮಸ್ಥರು ತೀವ್ರ ಆತಂಕ, ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ನ್ಯಾಯಾಧೀಶರ ಮೇಲೆ ಚಪ್ಪಲಿ ಎಸೆದ ಆರೋಪಿ

ಥಾಣೆ: ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಸೆಷನ್ಸ್ ನ್ಯಾಯಾಲಯದಲ್ಲಿ ವಿಚಾರಣೆ ವೇಳೆ ಕೊಲೆ ಪ್ರಕರಣದ ಆರೋಪಿ ನ್ಯಾಯಾಧೀಶರ ಮೇಲೆ ಚಪ್ಪಲಿ ಎಸೆದಿದ್ದಾನೆ. ಚಪ್ಪಲಿ ನ್ಯಾಯಾಧೀಶರಿಗೆ ತಾಗಲಿಲ್ಲ ಬದಲಿಗೆ ಅವರ ಮೇಜಿನ ಮುಂದೆ ಮರದ ಚೌಕಟ್ಟಿಗೆ ಬಡಿದು ಬೆಂಚ್ ಕ್ಲರ್ಕ್ ಪಕ್ಕದಲ್ಲಿ ಬಿದ್ದಿತು ಎಂದು ಪೊಲೀಸರು ತಿಳಿಸಿದ್ದಾರೆ. ಕಲ್ಯಾಣ್ ಪಟ್ಟಣದ ನ್ಯಾಯಾಲಯದಲ್ಲಿ ಈ ಘಟನೆ ನಡೆದಿದ್ದು, ಆರೋಪಿಗಳ ವಿರುದ್ಧ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಲಾಗಿದೆ. ಆರೋಪಿ ಕಿರಣ್ ಸಂತೋಷ್ ಭರಮ್ ಅವರನ್ನು ಕೊಲೆ ಪ್ರಕರಣದ ವಿಚಾರಣೆಗಾಗಿ ಜಿಲ್ಲಾ ಮತ್ತು ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ಆರ್ ಜಿ ವಾಘಮಾರೆ ಅವರ ಮುಂದೆ ಹಾಜರುಪಡಿಸಲಾಗಿತ್ತು. ಈ ವೇಳೆ ಆರೋಪಿ ತಮ್ಮ ಪ್ರಕರಣವನ್ನು ಬೇರೆ ನ್ಯಾಯಾಲಯಕ್ಕೆ ವಹಿಸುವಂತೆ ನ್ಯಾಯಾಧೀಶರಲ್ಲಿ ಮನವಿ ಮಾಡಿದರು.

ನ್ಯಾಯಾಧೀಶರು ಆರೋಪಿಗೆ ತಮ ವಕೀಲರ ಮೂಲಕ ಅರ್ಜಿ ಸಲ್ಲಿಸುವಂತೆ ಹೇಳಿದರು. ನಂತರ ಅವರ ವಕೀಲರ ಹೆಸರನ್ನು ಕರೆಯಲಾಯಿತು, ಆದರೆ ಅವರು ಸುತ್ತಮುತ್ತ ಇರಲಿಲ್ಲ ಮತ್ತು ನ್ಯಾಯಾಲಯಕ್ಕೆ



ಹಾಜರಾಗಲಿಲ್ಲ. ಹೀಗಾಗಿ ಆರೋಪಿಯನ್ನು ವಕಾಲತ್ತು ವಹಿಸಲು ಮತ್ತೊಬ್ಬ ವಕೀಲರ ಹೆಸರನ್ನು ನೀಡುವಂತೆ ಕೋರಲಾಗಿದ್ದು, ನ್ಯಾಯಾಲಯ ಹೊಸ ದಿನಾಂಕವನ್ನು ನೀಡಿತ್ತು ಎಂದು ಅವರು ಹೇಳಿದರು.

ಆಗಾರೋಪಿಯು ಕೆಳಗೆ ಬಾಗಿ, ತನ್ನ ಚಪ್ಪಲಿಯನ್ನು ಹೊರತೆಗೆದು ನ್ಯಾಯಾಧೀಶರ ದಿಕ್ಕಿನಲ್ಲಿ ಎಸೆದನು, ನ್ಯಾಯಾಲಯದಲ್ಲಿ ಹಾಜರಿದ್ದ ಎಲ್ಲರನ್ನು ಆಶ್ಚರ್ಯಚಕಿತಗೊಳಿಸಿದನು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

# ವಿದ್ಯುತ್ ಅವಘಡ : ತನ್ನ ಪತ್ನಿ ತಾಯಿ ರಕ್ಷಣೆಗೆ ಮುಂದಾದ ವ್ಯಕ್ತಿ ಸಾವು

ಮೈಸೂರು: ಮನೆಯಲ್ಲಿ ವಿದ್ಯುತ್ ಅವಘಡ ಸಂಭವಿಸಿ ವ್ಯಕ್ತಿಯೊಬ್ಬ ಸಾವನ್ನಪ್ಪಿರುವ ಘಟನೆ ಮೈಸೂರು ಜಿಲ್ಲೆ ಟಿ ನರಸೀಪುರ ತಾಲ್ಲೂಕಿನ ಕೊತ್ತೆಗಾಲ ಗ್ರಾಮದಲ್ಲಿ ನಡೆದಿದೆ.


ಲೋಕೇಶ್ (33) ವರ್ಷ ಮೃತಪಟ್ಟ ವ್ಯಕ್ತಿ. ತಡರಾತ್ರಿ ಈ ಘಟನೆ ನಡೆದಿದ್ದು, ಮನೆಯಲ್ಲಿದ್ದ ವೇಳೆ ಪತ್ನಿ ಕಾವ್ಯ ಹಾಗೂ ತಾಯಿ ನಾಗಮ್ಮಗೆ ವಿದ್ಯುತ್ ಸ್ಪರ್ಶಿಸಿದ್ದು, ಈ ಸಮಯದಲ್ಲಿ ಲೋಕೇಶ್ ತನ್ನ ಪತ್ನಿ ತಾಯಿ ರಕ್ಷಣೆಗೆ ಮುಂದಾಗಿದ್ದರು. ಆದರೆ ವಿದ್ಯುತ್ ಶಾಕ್ ನಿಂದ ಲೋಕೇಶ್ ಅವರೇ ಮೃತಪಟ್ಟಿದ್ದಾರೆ. ಲೋಕೇಶ್ ಪತ್ನಿ ಕಾವ್ಯ ಹಾಗೂ ತಾಯಿ ನಾಗಮ್ಮಗೆ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸ್ಥಳಕ್ಕೆ ಚೆಸ್ಕಾಂ ಹಾಗೂ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಕುರಿತು ಟಿ.ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹೊಸ ಇಂಟರ್‌ನೆಟ್ ಟಿವಿ ಸೇವೆ ಪ್ರಾರಂಭಿಸಿದ ಬಿಎಸ್‌ಎನ್‌ಎಲ್

ಬಿಎಸ್‌ಎನ್‌ಎಲ್ ತನ್ನ ಮೊಬೈಲ್ ಚಂದಾದಾರರಿಗಾಗಿ ಹೊಸ ಇಂಟರ್ನೆಟ್ ಟಿವಿ ಸೇವೆಯನ್ನು ಪ್ರಾರಂಭಿಸಿದೆ. ಇದರ ಹೆಸರು ಐಖಿಗಿ ಅಂತಾ. ಈ ಹೊಸ ಇಂಟರ್ನೆಟ್ ಟಿವಿಯಲ್ಲಿ ನೀವು ಸುಮಾರು 300 ಟಿವಿ ಚಾನೆಲ್‌ಗಳು, ಚಲನಚಿತ್ರಗಳು, ವೆಬ್ ಸೀರಿಸ್ ಮತ್ತು ಸಾಕ್ಷ್ಯಚಿತ್ರಗಳು ಉಚಿತವಾಗಿ ನೋಡಬಹುದಾಗಿದೆ. ಇದರ ಬಗೆಗಿನ ಹೆಚ್ಚಿನ ಮಾಹಿತಿ ಇಲ್ಲಿದೆ.

ಸರ್ಕಾರಿ ಟೆಲಿಕಾಂ ಕಂಪನಿ ಬಿಎಸ್‌ಎನ್‌ಎಲ್ ತನ್ನ ಗ್ರಾಹಕರಿಗಾಗಿ ಮೊಬೈಲ್‌ನಲ್ಲಿ ಇಂಟರ್ನೆಟ್ ಟಿವಿಯನ್ನು ಪ್ರಾರಂಭಿಸಿದೆ. ಈ ಸೇವೆಗೆ ಬಿಎಸ್‌ಎನ್‌ಎಲ್‌ನ ಇಂಟ್ರಾನೆಟ್ ಟಿವಿ (ಐಖಿಗಿ) ಎಂದು ಹೆಸರಿಸಲಾಗಿದೆ. ಈ ಯೋಜನೆಯಲ್ಲಿ ಕಂಪನಿಯು ಮೊಬೈಲ್‌ನಲ್ಲಿ 300 ಟಿವಿ ಚಾನೆಲ್‌ಗಳನ್ನು ನೀಡುತ್ತಿದೆ. ಸದ್ಯ ಈ ಯೋಜನೆಯನ್ನು ಪುದುಚೇರಿಯಲ್ಲಿ ಪ್ರಾರಂಭಿಸಲಾಗಿದೆ. ನಂತರ ಇದನ್ನು ದೇಶದ ಇತರ ಭಾಗಗಳಲ್ಲಿಯೂ ಅಳವಡಿಸಲಾಗುತ್ತದೆ. ಇದರಲ್ಲಿ ಬಿಎಸ್‌ಎನ್‌ಎಲ್ ಗ್ರಾಹಕರು ಯಾವುದೇ ವೆಚ್ಚವಿಲ್ಲದೇ ಉತ್ತಮ ಗುಣಮಟ್ಟದ ಮನರಂಜನೆ ಪಡೆಯಲಿದ್ದಾರೆ.

ಐಖಿಗಿ ಯ ಪ್ರಯೋಜನಗಳೇನು?: ಈ ಸೇವೆಯಲ್ಲಿ ಗ್ರಾಹಕರು ಯಾವುದೇ ಶುಲ್ಕವನ್ನು ಪಾವತಿಸದೇ ಅನಿಯಮಿತವಾಗಿ ವೀಕ್ಷಿಸಬಹುದು. ಗ್ರಾಹಕರು ಲೈವ್ ಟಿವಿ ಜೊತೆಗೆ ವಿವಿಧ ಭಾಷೆಗಳಲ್ಲಿ ಚಲನಚಿತ್ರಗಳು, ವೆಬ್ ಸೀರಿಸ್ ಮತ್ತು ಸಾಕ್ಷ್ಯಚಿತ್ರಗಳನ್ನು ವೀಕ್ಷಿಸಲು ಸಾಧ್ಯವಾಗುತ್ತದೆ. ಈ ಸೇವೆಗೆ ಬಿಎಸ್‌ಎನ್‌ಎಲ್‌ನ ಸುರಕ್ಷಿತ ಇಂಟ್ರಾನೆಟ್ ತಂತ್ರಜ್ಞಾನವನ್ನು ಬಳಸಲಾಗುವುದು. ಇದು ಅತ್ಯುತ್ತಮ ವಿಡಿಯೋ ಗುಣಮಟ್ಟವನ್ನು ಒದಗಿಸುತ್ತದೆ. ಈ ಸೇವೆಗಾಗಿ ಃಖಓಐ ಔಖಿಖಿಪಟಚಿಥಿ ಕಡಿಜಟುಣಟ




ನೊಂದಿಗೆ ಪಾಲುದಾರಿಕೆ ಹೊಂದಿದೆ.

ಇದು ಔಖಿಖಿ ಅಗ್ರಿಗೇಟರ್ ಆಗಿದ್ದು, ಇದು 37 ಪ್ರೀಮಿಯಂ ಔಖಿಖಿ ಪ್ಲಾಟ್‌ಫಾರ್ಮ್‌ಗಳು ಮತ್ತು 500+ ಲೈವ್ ಟಿವಿ ಚಾನೆಲ್‌ಗಳಿಂದ ವಿಷಯವನ್ನು ಒದಗಿಸುತ್ತದೆ. ಮುಂದಿನ ದಿನಗಳಲ್ಲಿ ಈ ರಾಜ್ಯಗಳಲ್ಲಿಯೂ ಲಭ್ಯ: ಪುದುಚೇರಿಯ ನಂತರ ಉತ್ತರ ಪ್ರದೇಶ, ಬಿಹಾರ ಮತ್ತು ಜಾರ್ಖಂಡ್‌ನಲ್ಲಿ ಮುಂದಿನ ತಿಂಗಳು ಈ ಸೇವೆಯನ್ನು ಪ್ರಾರಂಭಿಸಲಾಗುವುದು.

ಶೀಘ್ರದಲ್ಲೇ ದೇಶದ ಇತರ ರಾಜ್ಯಗಳಲ್ಲಿ ಬಿಡುಗಡೆ ಮಾಡಲು ಕಂಪನಿ ಸಿದ್ಧತೆ ನಡೆಸಿದೆ. ಬಿಎಸ್‌ಎನ್‌ಎಲ್ ಸಿಎಂಡಿ ರಾಬರ್ಟ್ ರವಿ ಮಾತನಾಡಿ, ಐಖಿಗಿ ಮೂಲಕ ಕಂಪನಿಯು ಪ್ರತಿಯೊಬ್ಬ ಗ್ರಾಹಕರಿಗೆ ಎಲ್ಲಿಂದಲಾದರೂ ಮತ್ತು ಯಾವುದೇ ಸಮಯದಲ್ಲಿ ಈ ಸೇವೆಯನ್ನು ಬಳಸಬಹುದಾಗಿದೆ ಎಂದು ಹೇಳಿದರು.

ಅಕ್ಟೋಬರ್‌ನಲ್ಲಿ ದೇಶದಾದ್ಯಂತ ಬಿಡುಗಡೆಯಾದ ಐಎಫ್‌ಟಿವಿಯನ್ನು ಪುದುಚೇರಿಯಲ್ಲಿ ಬಿಎಸ್‌ಎನ್‌ಎಲ್ ಬಿಡುಗಡೆ ಮಾಡಿದೆ. ಇದು ಉಚಿತ ಸೇವೆಯೂ ಆಗಿದೆ. ಇದರಲ್ಲಿ 500 ಕ್ಕೂ ಹೆಚ್ಚು ಟಿವಿ ಚಾನೆಲ್‌ಗಳು ಬಿಎಸ್‌ಎಲ್‌ಎನ್‌ನ ಈಖಿಖಿಊ ನೆಟ್‌ವರ್ಕ್‌ನಲ್ಲಿ ಲಭ್ಯವಿದೆ. ಎಲ್ಲ ಬಿಎಸ್‌ಎನ್‌ಎಲ್‌ನ ಈಖಿಖಿಊ ಗ್ರಾಹಕರು ಈ ಸೇವೆಯನ್ನು ಉಚಿತವಾಗಿ ಬಳಸಲು ಸಾಧ್ಯವಾಗುತ್ತದೆ. ಇದಕ್ಕಾಗಿ ಅವರು ಕಂಪನಿಗೆ ತಮ್ಮ ಒಪ್ಪಿಗೆಯನ್ನು ನೀಡಬೇಕಾಗುತ್ತದೆ. ನಂತರ ಈ ಸೇವೆಯನ್ನು ಕ್ಟಿವೇಟ್ ಆಗುತ್ತದೆ.

# ಬಸ್‌ಗೆ ಡಿಕ್ಕಿ: ಸವಾರರಿಬ್ಬರು ಸಾವು

ಶಿವಮೊಗ್ಗ: ಬೈಕ್‌ಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರರಿಬ್ಬರು ಸಾವನ್ನಪ್ಪಿರುವ ಘಟನೆ ಭಾನುವಾರ ರಾತ್ರಿ ಶಿವಮೊಗ್ಗದಲ್ಲಿ ನಡೆದಿದೆ.



ಶಿವಮೊಗ್ಗ ನಗರದ ಪ್ರವಾಸಿ ಮಂದಿರದ ವೃತ್ತದ ಬಳಿಯ ಈಡಿಗರ ಭವನ ರಸ್ತೆಯ ತಿರುವಿನಲ್ಲಿ ಅಪಘಾತ ನಡೆದಿದೆ. ಘಟನೆಯಲ್ಲಿ ಸೊರಬ ತಾಲೂಕು ಬೆಣ್ಣೆಗೆರೆ ನಿವಾಸಿ ರೋಹಿತ್ (26) ಹಾಗೂ ಹಾವೇರಿ ಜಿಲ್ಲೆ ಮಲೆಬೆನ್ನೂರು ತಾಲೂಕು ಬೇವಿನಹಳ್ಳಿ ಗ್ರಾಮದ ಜೀವನ್ (20) ಸಾವನ್ನಪ್ಪಿದ್ದಾರೆ.

ರೋಹಿತ್ ಸಾಫ್ಟ್ ವೇರ್ ಇಂಜಿನಿಯರ್ ಆಗಿದ್ದು, ಬೆಂಗಳೂರಿನಲ್ಲಿ ಉದ್ಯೋಗಿಯಾಗಿದ್ದರು. ಜೀವನ್ ಇಂಜಿನಿಯರಿಂಗ್ ದ್ವಿತೀಯ ವರ್ಷದಲ್ಲಿ ಓದುತ್ತಿದ್ದರು. ಇವರಿಬ್ಬರು ಎಲ್ಲಿಂದ ಬಂದರು ಎಂಬ ಮಾಹಿತಿ ಇಲ್ಲ. ಆದರೆ, ಶಿವಮೊಗ್ಗದ ಬೊಮ್ಮನಕಟ್ಟೆಯ ತಮ್ಮ ಸಂಬಂಧಿಗಳ ಮನೆಗೆ ಹೋಗುತ್ತಿದ್ದರು ಎನ್ನಲಾಗಿದೆ. ಅಪಘಾತದಲ್ಲಿ ರೋಹಿತ್ ಸ್ಥಳದಲ್ಲಿಯೇ ಸಾವನ್ನಪ್ಪಿದರೆ, ಜೀವನ್ ಆಸ್ಪತ್ರೆಗೆ ಸಾಗಿಸುವಾಗ ಸಾವನ್ನಪ್ಪಿದ್ದಾರೆ. ಈ ಕುರಿತು ಪಶ್ಚಿಮ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

